ಸಂಪುಟ: 11 ಸಂಚಿಕೆ: 147 ಪುಟ: 4+2 ಬೆಲೆ : 3.00 ಮಂಗಳವಾರ ಜುಲೈ 14, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ






Volume : 11 Issue : 147 Pages : 4+2 Rate : 3.00 Tuesday July 14, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

ಮೊದಲ ಹಂತದ ಅಭ್ಯರ್ಥಿಗಳ ಪಟ್ಟಿ ಶೀಘ್ರ ಬಿಡುಗಡೆ | ಎಸ್ಐಆರ್ ವಿರುದ್ಧ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಮೈಸೂರು ವಾಗ್ದಾಳಿ

# ರಾಜ್ಯದ ಎಲ್ಲ ಕ್ಷೇತ್ರಗಳಲ್ಲೂ ಎಸ್‌ಡಿಪಿಐ ಸ್ಪರ್ಧೆ



**ವಿಜಯಸಾಕ್ಷಿ ಸುದ್ದಿ, ಗದಗ**

2028ರ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲೂ ಸ್ಪರ್ಧಿಸಲು ಎಸ್‌ಡಿಪಿಐ ಪಕ್ಷ ತೀರ್ಮಾನಿಸಿದ್ದು, ಕಳೆದ ಎರಡು ವರ್ಷಗಳಿಂದಲೇ ಚುನಾವಣಾ ಪೂರ್ವ ಸಿದ್ಧತೆಗಳನ್ನು ಆರಂಭಿಸಲಾಗಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಮೈಸೂರು ತಿಳಿಸಿದರು.

ನಗರದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷದ ಸಂಘಟನೆ ಬಲಪಡಿಸುವುದು ಹಾಗೂ ಜನಪರ ಹೋರಾಟಗಳನ್ನು ತೀವ್ರಗೊಳಿಸುವ ಉದ್ದೇಶದಿಂದ ರಾಜ್ಯಾದ್ಯಂತ ವ್ಯಾಪಕ ಸಿದ್ಧತೆ ಕೈಗೊಳ್ಳಲಾಗಿದೆ. ಗದಗ ಸೇರಿದಂತೆ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ನಿರ್ಧಾರ ಕೈಗೊಂಡಿದ್ದು, ಮೊದಲ ಹಂತದ ಅಭ್ಯರ್ಥಿಗಳ ಪಟ್ಟಿಯನ್ನು ಶೀಘ್ರದಲ್ಲೇ ಪ್ರಕಟಿಸಲಾಗುವುದು ಎಂದು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್ಐಆರ್) ಕುರಿತು ಪ್ರತಿಕ್ರಿಯಿಸಿದ ಅವರು, ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆಗೆ ಪಕ್ಷದ ವಿರೋಧವಿಲ್ಲ. ಆದರೆ, ಅದರ ಹೆಸರಿನಲ್ಲಿ ಜನರನ್ನು ಸಂಕಷ್ಟಕ್ಕೆ ಸಿಲುಕಿಸುವ ರೀತಿಯಲ್ಲಿ ನಡೆಯುತ್ತಿರುವ ಪ್ರಕ್ರಿಯೆ ಜನವಿರೋಧಿ ಹಾಗೂ ಸಂವಿಧಾನ ವಿರೋಧಿಯಾಗಿದೆ ಎಂದು ಆರೋಪಿಸಿದರು.

> ಮತದಾರರ ಪಟ್ಟಿ ಪರಿಷ್ಕರಣೆ ತಪ್ಪಲ್ಲ. ಆದರೆ ಎಸ್ಐಆರ್ ಹೆಸರಿನಲ್ಲಿ ಜನರನ್ನು ಸಂಕಷ್ಟಕ್ಕೆ ತಳ್ಳುವುದು ಹಾಗೂ ಬಿಎಲ್‌ಒಗಳ ಮೇಲೆ ಒತ್ತಡ ಹೇರುವುದು ಸರಿಯಲ್ಲ. ಈ ಪ್ರಕ್ರಿಯೆ ಪಾರದರ್ಶಕವಾಗಿ ನಡೆಯಬೇಕು.
>
> – ಅಬ್ದುಲ್ ಮಜೀದ್ ಮೈಸೂರು, ರಾಜ್ಯಾಧ್ಯಕ್ಷ, ಎಸ್‌ಡಿಪಿಐ

ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅವೈಜ್ಞಾನಿಕ ಕ್ರಮಗಳನ್ನು ಅನುಸರಿಸಲಾಗುತ್ತಿದ್ದು, 2002ರ ದಾಖಲೆಗಳನ್ನು ಕಡ್ಡಾಯಗೊಳಿಸುವುದು ಸಮಂಜಸವಲ್ಲ. ಕೇವಲ ಹೆಸರಿನ ಕಾಗುಣಿತದ ದೋಷವನ್ನು ಆಧಾರವನ್ನಾಗಿ ಮಾಡಿಕೊಂಡು ಕ್ರಮ ಕೈಗೊಳ್ಳುವುದು ಸಂವಿಧಾನದ ಆಶಯಕ್ಕೆ ವಿರುದ್ಧವಾಗಿದೆ ಎಂದು ಅವರು ಹೇಳಿದರು.

ಬೂತ್ ಮಟ್ಟದ ಅಧಿಕಾರಿಗಳ (ಬಿಎಲ್‌ಒ) ಮೇಲೆ ಅನಗತ್ಯ ಒತ್ತಡ ಹೇರಿ ಕೆಲಸ ಮಾಡಿಸಲಾಗುತ್ತಿದೆ. ಸಮರ್ಪಕ ಮ್ಯಾಪಿಂಗ್ ನಡೆಸದೆ ಗುರಿ ನಿಗದಿಪಡಿಸುವುದರಿಂದ ಒಬ್ಬರ ಮಾಹಿತಿಯನ್ನು ಮತ್ತೊಬ್ಬರ ಹೆಸರಿಗೆ ಮ್ಯಾಪಿಂಗ್ ಮಾಡುವಂತಹ ಗೊಂದಲಗಳು ಉಂಟಾಗುತ್ತಿವೆ ಎಂದು ಆರೋಪಿಸಿದರು.

ಪ್ರಸ್ತುತ ರಾಜ್ಯದಲ್ಲಿ ಯಾವುದೇ ಚುನಾವಣೆಗಳಿಲ್ಲ. ಆದ್ದರಿಂದ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯದಲ್ಲಿ ಅನಗತ್ಯ ಗಡಿಬಿಡಿ ಮಾಡದೆ, ಬಿಎಲ್‌ಒಗಳು ತಮ್ಮ ನಿಯಮಿತ ಕರ್ತವ್ಯಗಳನ್ನು ನಿರ್ವಹಿಸಿದ ಬಳಿಕ ಮನೆ-ಮನೆಗೆ ತೆರಳಿ ಸಮರ್ಪಕವಾಗಿ ಕಾರ್ಯ ನಿರ್ವಹಿಸಲು ಅವಕಾಶ ನೀಡಬೇಕು. ನಿರಂತರ ಒತ್ತಡದಿಂದ ಹಲವಾರು ಬಿಎಲ್‌ಒಗಳು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಅಬ್ದುಲ್ ಮಜೀದ್ ಮೈಸೂರು ಹೇಳಿದರು.

### ವಿಪಕ್ಷ ನಿರ್ಮೂಲನೆ ಯತ್ನ: ಆರೋಪ

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಎಸ್‌ಡಿಪಿಐ ರಾಷ್ಟ್ರೀಯ ಅಧ್ಯಕ್ಷ ಎಂ.ಕೆ. ಫೈಜಿ, ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್) ಮೂಲಕ ಕೇಂದ್ರ ಸರ್ಕಾರವು ದೇಶವನ್ನು ವಿಪಕ್ಷ ರಹಿತವಾಗಿಸಲು ಯತ್ನಿಸುತ್ತಿದೆ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರವು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಡೆಗಣಿಸಿ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಂಡು ಬಿಜೆಪಿಗೆ ಮತ ಹಾಕುವವರನ್ನು ಮಾತ್ರ ಉಳಿಸಿ, ಉಳಿದವರನ್ನು ಮತದಾರರ ಪಟ್ಟಿಯಿಂದ ಕೈಬಿಡುವ ಪ್ರಯತ್ನ ನಡೆಯುತ್ತಿದೆ ಎಂದು ಅವರು ದೂರಿದರು.

ಅಲ್ಪಸಂಖ್ಯಾತರು, ಹಿಂದುಳಿದವರು ಹಾಗೂ ದಲಿತ ಸಮುದಾಯಗಳು ಒಗ್ಗಟ್ಟಾಗಿ ಪ್ರಜಾಪ್ರಭುತ್ವ ರಕ್ಷಣೆಗಾಗಿ ಹೋರಾಟ ನಡೆಸಬೇಕಾದ ಅಗತ್ಯವಿದೆ. ಸ್ಥಳೀಯ ಸಂಸ್ಥೆಗಳಿಂದ ಹಿಡಿದು ಲೋಕಸಭೆ ಚುನಾವಣೆಯವರೆಗೆ ಎಸ್‌ಡಿಪಿಐ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಪಕ್ಷ ನಿರ್ಧರಿಸಿದೆ ಎಂದು ತಿಳಿಸಿದರು.

ಅಂಗನವಾಡಿ ಮುಂದೆ ನೀರು ನಿಂತು ಅವ್ಯವಸ್ಥೆ | ಕಸದ ರಾಶಿ ನಡುವೆ ಪುಟಾಣಿಗಳ ಓಡಾಟ

## ಮಕ್ಕಳ ಜೀವದ ಜೊತೆ ಚೆಲ್ಲಾಟವೇ?



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಾರ್ಡ್ ನಂ. 1ರ ಕುಷ್ಟಗಿಚಾಳದಲ್ಲಿರುವ ಅಂಗನವಾಡಿ ಕೇಂದ್ರದಲ್ಲಿ ಮೂಲಸೌಕರ್ಯದ ಕೊರತೆ ತೀವ್ರವಾಗಿ ಕಾಡುತ್ತಿದ್ದು, ಪುಟಾಣಿ ಮಕ್ಕಳು ಪರದಾಡುವಂತಾಗಿದೆ.

ಅಂಗನವಾಡಿ ಕೇಂದ್ರದ ಮುಂಭಾಗದಲ್ಲಿ ನೀರಿನ ಪೈಪ್ ಒಡೆದು ನೀರು ಕೆರೆಯಂತೆ ನಿಂತಿದ್ದು, ಮಕ್ಕಳು ಹಾಗೂ ಪಾಲಕರು ಅದೇ ನೀರಿನ ಮಧ್ಯೆ ಓಡಾಡಬೇಕಾದ ಅನಿವಾರ್ಯತೆ ಎದುರಾಗಿದೆ. ನಗರಸಭೆಯ ನಿರ್ಲಕ್ಷ್ಯದಿಂದ ಸಮಸ್ಯೆ ದಿನದಿಂದ ದಿನಕ್ಕೆ ಉಲ್ಬಣವಾಗುತ್ತಿದೆ ಎಂಬ ಆರೋಪ ಕೇಳಿ ಬಂದಿದೆ.

ಅಂಗನವಾಡಿ ಕೇಂದ್ರದ ಪಕ್ಕದಲ್ಲೇ ಕಸದ ರಾಶಿ ಬಿದ್ದಿದ್ದು, ಅದರಲ್ಲಿ ನಾಯಿಗಳು ಹಾಗೂ ಹಂದಿಗಳು ಓಡಾಡುತ್ತಿರುವ ದೃಶ್ಯ ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಸಾಂಕ್ರಾಮಿಕ ರೋಗ ಹರಡುವ ಭೀತಿ ಎದುರಾಗಿದ್ದರೂ ಸಂಬಂಧಿಸಿದ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಸಾರ್ವಜನಿಕರು ದೂರಿದ್ದಾರೆ.

ಕುಷ್ಟಗಿಚಾಳ, ಸ್ಲ್ಯಾಬ್ ಓಣಿ ಹಾಗೂ ಗಾಂಧಿನಗರ ಭಾಗದ ಸುಮಾರು 15 ರಿಂದ 20 ಮಕ್ಕಳು ಪ್ರತಿದಿನ ಈ ಅಂಗನವಾಡಿಗೆ ಬರುತ್ತಿದ್ದು, ಅಸ್ವಚ್ಛ ವಾತಾವರಣದಲ್ಲೇ ಕಲಿಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಸ್ಥಳೀಯರು ಹಲವು ಬಾರಿ ಸಮಸ್ಯೆ ಪರಿಹರಿಸುವಂತೆ ಮನವಿ ಮಾಡಿದರೂ ಅಧಿಕಾರಿಗಳು ಕಾಟಾಚಾರಕ್ಕೆ ಮಣ್ಣು ಹಾಕಿ ಕೈ ತೊಳೆದುಕೊಂಡಿದ್ದಾರೆ ಎಂದು ಆರೋಪಿಸಿದ್ದು, ತಕ್ಷಣ ನೀರು ತೆರವುಗೊಳಿಸಿ, ಕಸ ವಿಲೇವಾರಿ ಮಾಡಿ, ಮಕ್ಕಳಿಗೆ ಸುರಕ್ಷಿತ ವಾತಾವರಣ ಕಲ್ಪಿಸಬೇಕೆಂದು ಒತ್ತಾಯಿಸಿದ್ದಾರೆ.

## ಎಸ್ಐಆರ್: ಜಿಲ್ಲೆಯ ಎಲ್ಲ ಮತದಾರರಿಗೆ ಎಣಿಕೆ ನಮೂನೆ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ-2026 (ಎಸ್ಐಆರ್) ಕಾರ್ಯಕ್ಕೆ ವೇಗ ಸಿಕ್ಕಿದ್ದು, ಜಿಲ್ಲೆಯ ಎಲ್ಲ 2,33,829 ಮತದಾರರಿಗೆ ಎಣಿಕೆ (Enumeration) ನಮೂನೆಗಳನ್ನು ಶೇ.100ರಷ್ಟು ವಿತರಿಸಲಾಗಿದೆ. ಜಿಲ್ಲೆಯ 226 ಮತಗಟ್ಟೆಗಳ ವ್ಯಾಪ್ತಿಯಲ್ಲೂ ನಮೂನೆ ವಿತರಣೆ ಪೂರ್ಣಗೊಂಡಿದ್ದು, ಇದೀಗ ಮನೆ-ಮನೆ ಸಮೀಕ್ಷೆ ಹಾಗೂ ಡಿಜಿಟೈಸೇಶನ್ ಕಾರ್ಯವನ್ನು ಅಧಿಕಾರಿಗಳು ತ್ವರಿತಗೊಳಿಸಿದ್ದಾರೆ.

ಜೂನ್ 30ರಿಂದ ಆರಂಭವಾಗಿರುವ ಮನೆ-ಮನೆ ಸಮೀಕ್ಷೆ ಹಾಗೂ ಮತದಾರರ ಮಾಹಿತಿಯನ್ನು ಡಿಜಿಟಲ್ ರೂಪದಲ್ಲಿ ದಾಖಲಿಸುವ ಕಾರ್ಯ ಜುಲೈ 29ರವರೆಗೆ ನಡೆಯಲಿದೆ. ಈಗಾಗಲೇ 67,345 ಎಣಿಕೆ ನಮೂನೆಗಳು (ಶೇ.28.80) ಡಿಜಿಟೈಸೇಶನ್ ಆಗಿದ್ದು, 262 ಅರ್ಜಿಗಳು ಆನ್‌ಲೈನ್ ಮೂಲಕ ಸಲ್ಲಿಕೆಯಾಗಿವೆ.

ಪರಿಶೀಲನೆ ವೇಳೆ 4,476 ಪ್ರಕರಣಗಳನ್ನು ಎಎಸ್‌ಡಿಡಿ ವಿಭಾಗಕ್ಕೆ ಸೇರಿಸಲಾಗಿದ್ದು, 89 ಮತದಾರರು ಪತ್ತೆಯಾಗದವರು ಅಥವಾ ಗೈರುಹಾಜರಾಗಿರುವವರು ಎಂದು ಗುರುತಿಸಲಾಗಿದೆ. ಅಲ್ಲದೆ 1,233 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡಿದ್ದು, 2,793 ಮಂದಿ ಮೃತಪಟ್ಟಿರುವುದು ದಾಖಲಾಗಿದೆ. ಈಗಾಗಲೇ ಮತದಾರರ ಪಟ್ಟಿಯಲ್ಲಿ ಹೆಸರು ಹೊಂದಿರುವ 354 ಪ್ರಕರಣಗಳು ಹಾಗೂ 7 ಇತರೆ ಪ್ರಕರಣಗಳು ಸಹ ಪತ್ತೆಯಾಗಿವೆ. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವ ಉದ್ದೇಶದಿಂದ ಜಿಲ್ಲೆಯ ಎಲ್ಲ ಮತಗಟ್ಟೆ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಮನೆ-ಮನೆಗೆ ತೆರಳಿ ಮಾಹಿತಿ ಸಂಗ್ರಹಿಸುವ ಹಾಗೂ ದಾಖಲೆಗಳನ್ನು ಪರಿಶೀಲಿಸುವ ಕಾರ್ಯಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ಉಪ ವಿಭಾಗಾಧಿಕಾರಿಗಳ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

ಲಂಚ, ಅನಗತ್ಯ ವಿಳಂಬದ ದೂರು ಹಿನ್ನೆಲೆ ದಾಖಲೆಗಳ ಪರಿಶೀಲನೆ | ದಿನವಿಡೀ ಸಂಚಲನ ಮೂಡಿಸಿದ ಕಾರ್ಯಾಚರಣೆ

# ನಗರಸಭೆಯ ಕಡತಗಳ ಜಾಲಾಡಿದ ಲೋಕಾಯುಕ್ತ



**ವಿಜಯಸಾಕ್ಷಿ ಸುದ್ದಿ, ಗದಗ**

ಲಂಚದ ಬೇಡಿಕೆ, ಸಾರ್ವಜನಿಕರ ಕೆಲಸಗಳಲ್ಲಿ ಅನಗತ್ಯ ವಿಳಂಬ ಹಾಗೂ ಆಡಳಿತಾತ್ಮಕ ನಿರ್ಲಕ್ಷ್ಯದ ಕುರಿತು ಬಂದ ದೂರುಗಳ ಹಿನ್ನೆಲೆಯಲ್ಲಿ ಗದಗ-ಬೆಟಗೇರಿ ನಗರಸಭೆ ಕಚೇರಿ ಮೇಲೆ ಸೋಮವಾರ ಲೋಕಾಯುಕ್ತ ಅಧಿಕಾರಿಗಳು ದಿಢೀರ್ ದಾಳಿ ನಡೆಸಿ, ವಿವಿಧ ವಿಭಾಗಗಳ ದಾಖಲೆಗಳನ್ನು ಸುದೀರ್ಘವಾಗಿ ಪರಿಶೀಲಿಸಿದರು.

ಗದಗ ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ಅವರ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಐವರು ಸಿಪಿಐಗಳು ಸೇರಿದಂತೆ ಗದಗ ಮತ್ತು ಧಾರವಾಡ ಜಿಲ್ಲೆಗಳ 15ಕ್ಕೂ ಹೆಚ್ಚು ಲೋಕಾಯುಕ್ತ ಅಧಿಕಾರಿಗಳು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

ಬೆಳಗ್ಗೆಯೇ ಏಳಕ್ಕೂ ಹೆಚ್ಚು ವಾಹನಗಳಲ್ಲಿ ನಗರಸಭೆ ಕಚೇರಿಗೆ ಆಗಮಿಸಿದ ಅಧಿಕಾರಿಗಳು ಏಕಕಾಲದಲ್ಲಿ ವಿವಿಧ ವಿಭಾಗಗಳಿಗೆ ತೆರಳಿ ದಾಖಲೆಗಳನ್ನು ಪರಿಶೀಲನೆಗೆ ಒಳಪಡಿಸಿದರು. ಸಾರ್ವಜನಿಕರಿಂದ ಸಲ್ಲಿಕೆಯಾಗಿದ್ದ ವಿವಿಧ ಅರ್ಜಿಗಳ ವಿಲೇವಾರಿ, ಪ್ರಗತಿ ಹಾಗೂ ಅನುಮೋದನೆಗೆ ಸಂಬಂಧಿಸಿದ ದಾಖಲೆಗಳನ್ನು ಅಧಿಕಾರಿಗಳು ಸೂಕ್ಷ್ಮವಾಗಿ ಪರಿಶೀಲಿಸಿದರು. ಸಂಜೆಯವರೆಗೂ ಮುಂದುವರಿದ ಕಾರ್ಯಾಚರಣೆಯಲ್ಲಿ ಹಲವು ದಾಖಲೆಗಳನ್ನು ಪರಿಶೀಲಿಸಿದ ಅಧಿಕಾರಿಗಳು, ವಿವಿಧ ವಿಭಾಗಗಳಲ್ಲಿ ಕಂಡುಬಂದಿರುವ ಲೋಪದೋಷಗಳ ಕುರಿತು ಮಾಹಿತಿ ಸಂಗ್ರಹಿಸಿ ಸಂಬಂಧಿಸಿದ ಅಧಿಕಾರಿಗಳಿಂದ ದಾಖಲೆ ಹಾಗೂ ವಿವರಣೆ ಪಡೆದುಕೊಂಡರು. ದಾಳಿಯ ಆರಂಭದಲ್ಲಿ ಲೋಕಾಯುಕ್ತ ಅಧಿಕಾರಿಗಳು ಏಕಾಏಕಿ ಆಗಮಿಸಿದ್ದರಿಂದ ನಗರಸಭೆ ಕಚೇರಿಯಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಯಿತು. ಸಿಬ್ಬಂದಿ ಹಾಗೂ ಅಧಿಕಾರಿಗಳಲ್ಲಿ ಗೊಂದಲ ಉಂಟಾದರೂ, ಯಾವುದೇ ಆತಂಕ ಬೇಡ, ಅಗತ್ಯ ದಾಖಲೆಗಳನ್ನು ಮಾತ್ರ ಒದಗಿಸುವಂತೆ ಅಧಿಕಾರಿಗಳು ಸೂಚಿಸಿ ಪರಿಶೀಲನೆ ಮುಂದುವರಿಸಿದರು.

ಗದಗ-ಬೆಟಗೇರಿ ನಗರಸಭೆಯಲ್ಲಿ ಹಲವು ವರ್ಷಗಳಿಂದ ಭ್ರಷ್ಟಾಚಾರ, ಲಂಚದ ಬೇಡಿಕೆ ಹಾಗೂ ಸಾರ್ವಜನಿಕರ ಕೆಲಸಗಳಲ್ಲಿ ಅನಗತ್ಯ ವಿಳಂಬವಾಗುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿದ್ದವು. ಹಲವು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೆಲ ಅಧಿಕಾರಿಗಳ ಕಾರ್ಯವೈಖರಿ ಕುರಿತು ಸಾರ್ವಜನಿಕರಿಂದ ಅಸಮಾಧಾನ ವ್ಯಕ್ತವಾಗುತ್ತಿದ್ದ ಹಿನ್ನೆಲೆಯಲ್ಲಿ ಲೋಕಾಯುಕ್ತ ದಾಳಿ ನಡೆದಿರುವುದು ಮಹತ್ವ ಪಡೆದಿದೆ.

ದಿನವಿಡೀ ನಡೆದ ಲೋಕಾಯುಕ್ತ ಕಾರ್ಯಾಚರಣೆ ಅವಳಿ ನಗರದಲ್ಲಿ ಭಾರೀ ಚರ್ಚೆಗೆ ಗ್ರಾಸವಾಯಿತು. ಪರಿಶೀಲನೆಯಲ್ಲಿ ಸಂಗ್ರಹಿಸಿದ ದಾಖಲೆಗಳ ಆಧಾರದ ಮೇಲೆ ಅಧಿಕಾರಿಗಳ ವಿರುದ್ಧ ಮುಂದಿನ ದಿನಗಳಲ್ಲಿ ಯಾವ ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರತ್ತ ಸಾರ್ವಜನಿಕರ ಚಿತ್ತ ನೆಟ್ಟಿದೆ.

### ಲೋಕಾಯುಕ್ತ ಪರಿಶೀಲನೆ ನಡೆಸಿದ ವಿಭಾಗಗಳು

1. ಬೀದಿದೀಪ ನಿರ್ವಹಣೆ
2. ಕುಡಿಯುವ ನೀರು ಪೂರೈಕೆ
3. ಟ್ಯಾಂಕರ್ ಮೂಲಕ ನೀರು ವಿತರಣೆ
4. ಲೋಕೋಪಯೋಗಿ ವಿಭಾಗ
5. ತೆರಿಗೆ ವಿಭಾಗ
6. ಸಾರ್ವಜನಿಕ ಅರ್ಜಿಗಳ ವಿಲೇವಾರಿ
7. ಇತರೆ ಆಡಳಿತ ವಿಭಾಗಗಳ ದಾಖಲೆಗಳು

ಬೆಳೆ ವಿಮೆ ಬಿಡುಗಡೆ, ರಾಷ್ಟ್ರೀಕೃತ ಬ್ಯಾಂಕ್ ಸಾಲ ಮನ್ನಾಗೆ ಆಗ್ರಹಿಸಿ ರೈತ ಸಂಘ ಮನವಿ

# ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಜಿಲ್ಲೆಯ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು, 2025ನೇ ಸಾಲಿನ ಬೆಳೆ ವಿಮೆ ಹಣವನ್ನು ಬಿಡುಗಡೆ ಮಾಡಬೇಕು ಹಾಗೂ ರಾಷ್ಟ್ರೀಕೃತ ಬ್ಯಾಂಕ್‌ಗಳ ಬೆಳೆ ಸಾಲವನ್ನು ಮನ್ನಾ ಮಾಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿತು.

ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ನೇತೃತ್ವದಲ್ಲಿ ತಿಮ್ಮಾಪುರ, ಹರ್ಲಾಪುರ ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ನೂರಾರು ರೈತರು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಮನವಿಯಲ್ಲಿ, ಮಳೆ ಕೊರತೆಯಿಂದ ಜಿಲ್ಲೆಯಾದ್ಯಂತ ತೀವ್ರ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ಜಲಾಶಯಗಳು, ಕೆರೆಗಳು ಹಾಗೂ ಕೊಳವೆಬಾವಿಗಳು ಬತ್ತಿವೆ. ಕುಡಿಯುವ ನೀರು ಮತ್ತು ಜಾನುವಾರುಗಳಿಗೆ ಮೇವಿನ ಕೊರತೆ ಎದುರಾಗಿದ್ದು, ರಾಜ್ಯ ಸರ್ಕಾರ ತಕ್ಷಣ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಒತ್ತಾಯಿಸಲಾಗಿದೆ.

ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿ ಈರುಳ್ಳಿ, ಮೆಣಸಿನಕಾಯಿ, ಸೂರ್ಯಕಾಂತಿ, ಜೋಳ, ಹೆಸರು, ಕಡಲೆ ಹಾಗೂ ಗೋಧಿ ಬೆಳೆಗಳಿಗೆ ವಿಮೆ ಮಾಡಿಸಿರುವ ರೈತರಿಗೆ ಬೆಳೆ ನಷ್ಟವಾದರೂ ಪರಿಹಾರ ಸಿಕ್ಕಿಲ್ಲ. ಸಂಬಂಧಪಟ್ಟ ವಿಮಾ ಕಂಪನಿಗಳ ಮೇಲೆ ಒತ್ತಡ ಹೇರಿ ಬಾಕಿ ವಿಮಾ ಹಣವನ್ನು ರೈತರ ಖಾತೆಗೆ ತಕ್ಷಣ ಜಮಾ ಮಾಡಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಅಲ್ಲದೆ ಎಸ್‌ಬಿಐ, ಕೆನರಾ ಬ್ಯಾಂಕ್, ಯೂನಿಯನ್ ಬ್ಯಾಂಕ್ ಹಾಗೂ ಬ್ಯಾಂಕ್ ಆಫ್ ಬರೋಡಾ ಸೇರಿದಂತೆ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಪಡೆದಿರುವ ಅಲ್ಪಾವಧಿ ಮತ್ತು ಮಧ್ಯಮಾವಧಿ ಬೆಳೆ ಸಾಲವನ್ನು 2018ರ ಮಾದರಿಯಲ್ಲಿ ಸಂಪೂರ್ಣ ಮನ್ನಾ ಮಾಡಬೇಕು ಎಂದು ಒತ್ತಾಯಿಸಲಾಗಿದೆ.

ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ ಮಾತನಾಡಿ, ತಿಮ್ಮಾಪುರ ಭಾಗದಲ್ಲಿ ಹೆಸರು, ಜೋಳ ಹಾಗೂ ಸೂರ್ಯಕಾಂತಿ ಬೆಳೆಗಳು ಸಂಪೂರ್ಣ ನಾಶವಾಗಿದ್ದು, ತಕ್ಷಣ ಪರಿಹಾರ ನೀಡದಿದ್ದರೆ ರೈತರು ಬದುಕು ನಡೆಸುವುದು ಕಷ್ಟವಾಗಲಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿಗಳು ಮನವಿ ಸ್ವೀಕರಿಸಿ ಸರ್ಕಾರದ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

> ಮಳೆ ಇಲ್ಲದೆ ಬೆಳೆಗಳು ಸಂಪೂರ್ಣ ಒಣಗಿ ಹೋಗಿವೆ. ರೈತರ ಪರಿಸ್ಥಿತಿ ಅತ್ಯಂತ ಚಿಂತಾಜನಕವಾಗಿದೆ. ಸರ್ಕಾರ ತಕ್ಷಣ ಸ್ಪಂದಿಸಿ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ, ಬೆಳೆ ವಿಮೆ ಹಣ ಬಿಡುಗಡೆ ಹಾಗೂ ಬೆಳೆ ಸಾಲ ಮನ್ನಾ ಮಾಡದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಅನಿವಾರ್ಯವಾಗಲಿದೆ.
>
> – ಯಲ್ಲಪ್ಪ ಎಚ್. ಬಾಬರಿ, ಜಿಲ್ಲಾ ಅಧ್ಯಕ್ಷ, ಕರ್ನಾಟಕ ರಾಜ್ಯ ರೈತ ಸಂಘ

ಈ ಸಂದರ್ಭದಲ್ಲಿ ರೈತ ಸಂಘದ ಮುಖಂಡರಾದ ಅಂದಪ್ಪ ಕೂಳೂರು, ಶರಣಪ್ಪ ಜೋಗಿನ, ಹನುಮಂತ ಭೀಮನೂರು, ಶೇಖಪ್ಪ ಘಂಟೆ, ಹನುಮಪ್ಪ ತಳವಾರ, ಶಿವಕುಮಾರ ಯತ್ನಟ್ಟಿ, ಶೇಖಪ್ಪ ಗಾಜಿ, ಕಪತ್ತಪ್ಪ ಸೋಂಪೂರ, ಬಸಪ್ಪ ಬನ್ನಿಮರದ, ಯಲ್ಲಪ್ಪ ಗಂಗರಾತ್ರಿ, ಮಾರುತಿ ಬಿಚಗಲ್ಲ, ಭೀಮಪ್ಪ ಆಲೂರು ಸೇರಿದಂತೆ ನೂರಾರು ರೈತರು ಉಪಸ್ಥಿತರಿದ್ದರು.

ನಕಲಿ ವೈದ್ಯರ ಬಂಡವಾಳ ಬಯಲು! ಕುಸಲಾಪೂರದಲ್ಲಿ ಪರಾರಿ | ಆದ್ರಳ್ಳಿಯಲ್ಲಿ ₹50 ಸಾವಿರ ದಂಡ!

# ಶಿರಹಟ್ಟಿಯಲ್ಲಿ ನಕಲಿ ವೈದ್ಯರಿಗೆ ಶಾಕ್



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಗ್ರಾಮೀಣ ಪ್ರದೇಶದ ಅಮಾಯಕ ಜನರ ಆರೋಗ್ಯದೊಂದಿಗೆ ಚೆಲ್ಲಾಟವಾಡುತ್ತಿರುವ ನಕಲಿ ವೈದ್ಯರ ವಿರುದ್ಧ ಆರೋಗ್ಯ ಇಲಾಖೆ ಕಾರ್ಯಾಚರಣೆ ತೀವ್ರಗೊಳಿಸಿದೆ. ಜಿಲ್ಲಾಡಳಿತದ ನಿರ್ದೇಶನದಂತೆ ಶಿರಹಟ್ಟಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ತಪಾಸಣೆ ನಡೆಸಿ ನಕಲಿ ವೈದ್ಯರಿಗೆ ನೋಟಿಸ್ ನೀಡುವುದರ ಜೊತೆಗೆ ದಂಡ ವಿಧಿಸಲಾಗುತ್ತಿದೆ.

ತಾಲೂಕು ಆರೋಗ್ಯಾಧಿಕಾರಿ ಡಾ. ಸುಭಾಸ ದೈಗೊಂಡ ನೇತೃತ್ವದ ತಂಡ ಖಚಿತ ಮಾಹಿತಿ ಮೇರೆಗೆ ಕುಸಲಾಪೂರ ಗ್ರಾಮಕ್ಕೆ ದಾಳಿ ನಡೆಸಿದ ವೇಳೆ, ನಕಲಿ ವೈದ್ಯ ಆಸ್ಪತ್ರೆಗೆ ಬೀಗ ಹಾಕಿ ಪರಾರಿಯಾಗಿದ್ದಾನೆ. ಇದೇ ವೇಳೆ ಆದ್ರಳ್ಳಿ ಗ್ರಾಮದಲ್ಲಿ ನಡೆಸಿದ ತಪಾಸಣೆಯಲ್ಲಿ ಅಕ್ರಮವಾಗಿ ವೈದ್ಯಕೀಯ ಸೇವೆ ನೀಡುತ್ತಿದ್ದ ವ್ಯಕ್ತಿಯ ವಿರುದ್ಧ ಕ್ರಮ ಜರುಗಿಸಿ ₹50 ಸಾವಿರ ದಂಡ ವಿಧಿಸಲಾಗಿದೆ.

ಆರೋಗ್ಯ ಇಲಾಖೆ ಅಧಿಕಾರಿಗಳ ಪ್ರಕಾರ, ಕೆಲವರು ತಜ್ಞ ವೈದ್ಯರ ಬಳಿ ಸಹಾಯಕರಾಗಿ ಕೆಲಸ ಮಾಡಿ ಬಳಿಕ ತಾವೇ ವೈದ್ಯರೆಂದು ಬಿಂಬಿಸಿಕೊಂಡು ಗ್ರಾಮೀಣ ಪ್ರದೇಶಗಳನ್ನೇ ಗುರಿಯಾಗಿಸಿಕೊಂಡು ಚಿಕಿತ್ಸೆ ನೀಡುತ್ತಿದ್ದಾರೆ. ಅಗತ್ಯ ವೈದ್ಯಕೀಯ ಪರೀಕ್ಷೆಗಳಿಲ್ಲದೆ ಹೆಚ್ಚಿನ ಪ್ರಮಾಣದ ಔಷಧಿ ಹಾಗೂ ಇಂಜೆಕ್ಷನ್ ನೀಡುತ್ತಿರುವುದು ಸಾರ್ವಜನಿಕರ ಜೀವಕ್ಕೆ ಅಪಾಯಕಾರಿಯಾಗಿದೆ ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ. ತಾಲೂಕಿನ ಎಲ್ಲ ಗ್ರಾಮಗಳಲ್ಲಿ ನಕಲಿ ವೈದ್ಯರು, ಅಕ್ರಮ ಆಸ್ಪತ್ರೆಗಳು ಹಾಗೂ ನಕಲಿ ಪ್ರಯೋಗಾಲಯಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದ್ದು, ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಇನ್ನಷ್ಟು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂಬ ಒತ್ತಾಯವೂ ಕೇಳಿಬಂದಿದೆ.

> ವಿವಿಧೆಡೆ ನಿರಂತರ ತಪಾಸಣೆ ನಡೆಸಲಾಗುತ್ತಿದೆ. ಖಚಿತ ಮಾಹಿತಿ ಮೇರೆಗೆ ಕುಸಲಾಪೂರಕ್ಕೆ ಭೇಟಿ ನೀಡಿದಾಗ ನಕಲಿ ವೈದ್ಯ ಆಸ್ಪತ್ರೆಗೆ ಬೀಗ ಹಾಕಿ ಪರಾರಿಯಾಗಿದ್ದಾನೆ. ಆದ್ರಳ್ಳಿಯಲ್ಲಿ ದಾಳಿ ನಡೆಸಿ ₹50 ಸಾವಿರ ದಂಡ ವಿಧಿಸಲಾಗಿದೆ. ಇಂತಹ ಕಾರ್ಯಾಚರಣೆ ಮುಂದುವರಿಯಲಿದೆ.
>
> – ಡಾ. ಸುಭಾಸ ದೈಗೊಂಡ, ತಾಲೂಕು ಆರೋಗ್ಯಾಧಿಕಾರಿ

ಎಸ್ಐಆರ್ ಪ್ರಕ್ರಿಯೆಗೆ ವೇಗ; ಮತದಾರರಿಗೆ ಡಿಸಿ ಮನವಿ

# ಗಣತಿ ನಮೂನೆ ಕಡ್ಡಾಯವಾಗಿ ಬಿಎಲ್‌ಒಗೆ ಸಲ್ಲಿಸಿ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್)-2026ರ ಪ್ರಕ್ರಿಯೆ ವೇಗವಾಗಿ ನಡೆಯುತ್ತಿದ್ದು, ಮನೆಮನೆಗೆ ವಿತರಿಸಲಾಗಿರುವ ಗಣತಿ ನಮೂನೆಗಳನ್ನು ಮತದಾರರು ನಿಗದಿತ ಅವಧಿಯೊಳಗೆ ಭರ್ತಿ ಮಾಡಿ ಸಂಬಂಧಿಸಿದ ಬಿಎಲ್‌ಒಗಳಿಗೆ ಕಡ್ಡಾಯವಾಗಿ ಸಲ್ಲಿಸಬೇಕು. ಇಲ್ಲದಿದ್ದರೆ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಯಾಗುವುದಿಲ್ಲ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಧಾರವಾಡ ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳ 1,665 ಮತಗಟ್ಟೆಗಳಲ್ಲಿ ಎಸ್ಐಆರ್ ಕಾರ್ಯ ನಡೆಯುತ್ತಿದ್ದು, ಒಟ್ಟು 16,21,961 ಮತದಾರರ ಪೈಕಿ 15,19,544 ಗಣತಿ ನಮೂನೆಗಳನ್ನು ವಿತರಿಸಲಾಗಿದ್ದು, ಶೇ.93.69ರಷ್ಟು ವಿತರಣೆ ಪೂರ್ಣಗೊಂಡಿದೆ ಎಂದು ತಿಳಿಸಿದರು. ಇದುವರೆಗೆ 3,33,765 ನಮೂನೆಗಳು ಗಣಕೀಕರಣಗೊಂಡಿದ್ದು, ಶೇ.20.58ರಷ್ಟು ಡಿಜಿಟಲೀಕರಣ ಪೂರ್ಣಗೊಂಡಿದೆ. ಉಳಿದ ನಮೂನೆಗಳನ್ನು ಮತದಾರರು ಶೀಘ್ರವೇ ಬಿಎಲ್‌ಒಗಳಿಗೆ ಹಿಂದಿರುಗಿಸಬೇಕು ಎಂದು ಮನವಿ ಮಾಡಿದರು. ಜಿಲ್ಲೆಯಲ್ಲಿ ಗೈರು ಹಾಜರಾತಿ, ಶಾಶ್ವತ ವಲಸೆ, ಮರಣ ಹಾಗೂ ದ್ವಿಪ್ರತಿ ಸೇರಿ 57,319 ಮತದಾರರನ್ನು ಗುರುತಿಸಲಾಗಿದ್ದು, ಈ ಕುರಿತು ರಾಜಕೀಯ ಪಕ್ಷಗಳಿಗೂ ಮಾಹಿತಿ ನೀಡಲಾಗಿದೆ ಎಂದು ಹೇಳಿದರು. ಮತದಾರರ ಅನುಕೂಲಕ್ಕಾಗಿ ಜಿಲ್ಲೆಯಲ್ಲಿ 509 ಬಿಎಲ್‌ಒ ಸೌಲಭ್ಯ ಕೇಂದ್ರಗಳನ್ನು ತೆರೆಯಲಾಗಿದ್ದು, ಗ್ರಾಮ ಪಂಚಾಯಿತಿ, ಗ್ರಾಮ ಒನ್, ನಾಡ ಕಚೇರಿ, ತಹಶೀಲ್ದಾರ್ ಕಚೇರಿ ಸೇರಿದಂತೆ ವಿವಿಧ ಸ್ಥಳಗಳಲ್ಲಿ ನಮೂನೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

### ಮಣ್ಣೆತ್ತಿನ ಅಮಾವಾಸ್ಯೆ: ಕೃಷಿ ಸಂಸ್ಕೃತಿ, ಬಸವಣ್ಣನ ಆರಾಧನೆ ಮತ್ತು ಗ್ರಾಮೀಣ ಬದುಕಿನ ಜೀವಂತ ಪರಂಪರೆ

# ಮಣ್ಣಿನ ಬಸವಣ್ಣನಲ್ಲಿದೆ ರೈತನ ಬದುಕಿನ ಭಕ್ತಿ–ಕೃತಜ್ಞತೆ

ಉತ್ತರಕರ್ನಾಟಕದ ರೈತಾಪಿ ಬದುಕಿನಲ್ಲಿ ವಿಶಿಷ್ಟ ಸ್ಥಾನ ಪಡೆದಿರುವ ಮಣ್ಣೆತ್ತಿನ ಅಮಾವಾಸ್ಯೆ ಕೇವಲ ಹಬ್ಬವಲ್ಲ; ಅದು ರೈತ, ಬಸವಣ್ಣ, ಮಣ್ಣು ಮತ್ತು ಪ್ರಕೃತಿಯ ನಡುವಿನ ಅವಿನಾಭಾವ ಸಂಬಂಧವನ್ನು ಸಾರುವ ಸಾಂಸ್ಕೃತಿಕ ಆಚರಣೆಯಾಗಿದೆ.

ಕಾರಹುಣ್ಣಿಮೆಯ ನಂತರ ಬರುವ ಈ ಅಮಾವಾಸ್ಯೆಯಂದು ರೈತರು ಮಣ್ಣಿನಿಂದ ಮಾಡಿದ ಬಸವಣ್ಣನನ್ನು ಪೂಜಿಸುವ ಮೂಲಕ ವರ್ಷಪೂರ್ತಿ ತಮ್ಮೊಂದಿಗೆ ದುಡಿದ ಎತ್ತುಗಳಿಗೆ ಕೃತಜ್ಞತೆ ಸಲ್ಲಿಸುತ್ತಾರೆ.

ಕೃಷಿ ಜೀವನದಲ್ಲಿ ಎತ್ತುಗಳು ರೈತನ ನಿಜವಾದ ಸಹಚರರು. ಹೊಲ ಉಳುಮೆಯಿಂದ ಹಿಡಿದು ಬಿತ್ತನೆ, ಬೆಳೆ ಸಾಗಾಣಿಕೆವರೆಗೆ ಕೃಷಿಯ ಪ್ರತಿಯೊಂದು ಹಂತದಲ್ಲೂ ಬಸವಣ್ಣನ ಪಾತ್ರ ಅನನ್ಯ. ಹೀಗಾಗಿ ಕಾರಹುಣ್ಣಿಮೆಯಂದು ಜೀವಂತ ಜಾನುವಾರುಗಳನ್ನು ಅಲಂಕರಿಸಿ ಪೂಜಿಸಿದರೆ, ಮಣ್ಣೆತ್ತಿನ ಅಮಾವಾಸ್ಯೆಯಂದು ಮಣ್ಣಿನ ಬಸವಣ್ಣನನ್ನು ಪೂಜಿಸುವ ಸಂಪ್ರದಾಯ ಇಂದಿಗೂ ಗ್ರಾಮೀಣ ಭಾಗಗಳಲ್ಲಿ ಜೀವಂತವಾಗಿದೆ.



ಆಷಾಢ, ಶ್ರಾವಣ ಮತ್ತು ಭಾದ್ರಪದ ಮಾಸಗಳಲ್ಲಿ ನಡೆಯುವ ಮಣ್ಣಿನ ಆರಾಧನೆಗಳಲ್ಲಿ ಮಣ್ಣೆತ್ತು, ಗುಳ್ಳವ್ವ, ಹುತ್ತಪ್ಪ, ಗಣಪ್ಪ ಹಾಗೂ ಜೋಕುಮಾರ ಪೂಜೆಗಳಿಗೆ ವಿಶೇಷ ಮಹತ್ವವಿದೆ. ಇವುಗಳಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ರೈತ ಸಮುದಾಯದ ಅತ್ಯಂತ ಸಂಭ್ರಮದ ಹಬ್ಬವಾಗಿದೆ.

ಹಬ್ಬಕ್ಕೆ ಹತ್ತು–ಹದಿನೈದು ದಿನಗಳ ಮುಂಚೆಯೇ ರೈತ ಕುಟುಂಬಗಳಲ್ಲಿ ಸಿದ್ಧತೆ ಆರಂಭವಾಗುತ್ತದೆ. ಎತ್ತುಗಳ ಕೊಂಬುಗಳನ್ನು ಕೆತ್ತಿ ಬಣ್ಣ ಹಚ್ಚುವುದು, ಕೊರಳಿಗೆ ಗಂಟೆ, ಕಾಲಿಗೆ ಗೆಜ್ಜೆ, ಬಣ್ಣದ ರಿಬ್ಬನ್‌ಗಳಿಂದ ಅಲಂಕರಿಸುವುದು ಹಬ್ಬದ ವಿಶೇಷ. ಹೋಳಿಗೆ, ಕಡಬು ಸೇರಿದಂತೆ ಸಿಹಿ ತಿನಿಸುಗಳನ್ನು ಮಾಡಿ ಎಡೆ ಹಿಡಿದು ಎತ್ತುಗಳನ್ನು ಆರಾಧಿಸಲಾಗುತ್ತದೆ.

ಈ ಹಬ್ಬ ಕುಂಬಾರ ಸಮುದಾಯದ ಬದುಕಿನೊಂದಿಗೆ ಸಹ ಬೆಸೆದುಕೊಂಡಿದೆ. ಹದ ಮಾಡಿದ ಮಣ್ಣಿನಿಂದ ಜೋಡಿ ಬಸವಣ್ಣನ ಮೂರ್ತಿಗಳನ್ನು ತಯಾರಿಸಿ ಗ್ರಾಮಗಳ ಸಂತೆಗಳಲ್ಲಿ ಮಾರಾಟ ಮಾಡುತ್ತಾರೆ. ರೈತರು ಹಣ ಅಥವಾ ದವಸಧಾನ್ಯ ನೀಡಿ ಅವುಗಳನ್ನು ಮನೆಗೆ ತಂದು ದೇವರ ಮನೆಯಲ್ಲಿ ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸುತ್ತಾರೆ.

ಮಣ್ಣಿನ ಬಸವಣ್ಣನ ಜೊತೆಗೆ ಮಕ್ಕಳು ಮಣ್ಣಿನಿಂದ ದನದ ಕೊಟ್ಟಿಗೆ, ಗಾಡಿ, ಮನೆ ಸೇರಿದಂತೆ ವಿವಿಧ ಕೃಷಿ ದೃಶ್ಯಗಳನ್ನು ರೂಪಿಸಿ ತಮ್ಮ ಸೃಜನಶೀಲತೆಯನ್ನು ಪ್ರದರ್ಶಿಸುತ್ತಾರೆ. ಎರಡು ಸಣ್ಣ ಪಾತ್ರೆಗಳಲ್ಲಿ ಮಣ್ಣು ತುಂಬಿಸಿ ಗೋಧಿ ಬಿತ್ತುವ ಟಸಸಿ ಆಡುವಟಿ ಸಂಪ್ರದಾಯವೂ ವಿಶೇಷವಾಗಿದೆ. ಮರುದಿನ ಆ ಸಸಿಯನ್ನು ತೋಟ ಅಥವಾ ಗುಡ್ಡದಲ್ಲಿ ಚೆಲ್ಲುವ ಮೂಲಕ ಸಮೃದ್ಧ ಬೆಳೆಯ ಸಂಕಲ್ಪ ಮಾಡಲಾಗುತ್ತದೆ.

ಪೂಜೆ ಮುಗಿದ ಬಳಿಕ ಮಕ್ಕಳು ಮಣ್ಣಿನ ಬಸವಣ್ಣಗಳನ್ನು ಸಣ್ಣ ಗಾಡಿಯಲ್ಲಿ ಕೂರಿಸಿ ಊರಿನ ಬೀದಿಗಳಲ್ಲಿ ಮೆರವಣಿಗೆ ನಡೆಸುತ್ತಾರೆ. ಮನೆಮನೆಗೆ ಚಕ್ಕುಲಿ ಹಂಚುವುದು, ನಂತರ ಮಣ್ಣಿನ ಬಸವಣ್ಣಗಳನ್ನು ಕೆರೆ ಅಥವಾ ನೀರಿನಲ್ಲಿ ವಿಸರ್ಜಿಸುವುದು ಸಂಪ್ರದಾಯವಾಗಿದೆ.

ಯಾಂತ್ರೀಕರಣದ ಯುಗದಲ್ಲೂ ಮಣ್ಣೆತ್ತಿನ ಅಮಾವಾಸ್ಯೆ ತನ್ನ ಸಾಂಸ್ಕೃತಿಕ ಮಹತ್ವವನ್ನು ಕಳೆದುಕೊಂಡಿಲ್ಲ. ರೈತನ ಶ್ರಮ, ಬಸವಣ್ಣನ ಸೇವೆ, ಮಣ್ಣಿನ ಪಾವಿತ್ರ್ಯ ಹಾಗೂ ಪ್ರಕೃತಿಯೊಂದಿಗಿನ ಮಾನವನ ಬಾಂಧವ್ಯವನ್ನು ನೆನಪಿಸುವ ಈ ಹಬ್ಬ ಇಂದಿಗೂ ಗ್ರಾಮೀಣ ಬದುಕಿನ ಆತ್ಮವಾಗಿ ಉಳಿದಿದೆ.

ಮುಂಗಾರು ಮಳೆಯೊಂದಿಗೆ ಬರುವ ಈ ಹಬ್ಬ ರೈತನ ಮನದಲ್ಲಿ ಹೊಸ ಭರವಸೆ ಮೂಡಿಸುತ್ತದೆ. ವರ್ಷಪೂರ್ತಿ ನಮ್ಮೊಂದಿಗೆ ದುಡಿದ ಬಸವಣ್ಣನಿಗೆ ಎಷ್ಟು ಪೂಜೆ ಮಾಡಿದರೂ ಕಡಿಮೆಯೇ ಎನ್ನುವ ರೈತನ ಭಾವನೆಯೇ ಮಣ್ಣೆತ್ತಿನ ಅಮಾವಾಸ್ಯೆಯ ನಿಜವಾದ ಸಂದೇಶವಾಗಿದೆ.



**-ಶಿವಕುಮಾರಸ್ವಾಮಿ ಕೊಟಗಿಮಠ**

---

### ಮಣ್ಣೆತ್ತಿನ ಅಮಾವಾಸ್ಯೆ–ಕೃಷಿ ಸಂಸ್ಕೃತಿ, ಪ್ರಕೃತಿ ಪೂಜೆ ಮತ್ತು ಗ್ರಾಮೀಣ ಪರಂಪರೆಯ ಜೀವಂತ ಹಬ್ಬ

# ಮಣ್ಣಿನ ಬಸವಣ್ಣನ ಆರಾಧನೆ...

ಗ್ರಾಮೀಣ ಕೃಷಿ ಸಂಸ್ಕೃತಿಯ ಜೀವಂತ ಪ್ರತೀಕವೆಂದೇ ಪರಿಗಣಿಸಲ್ಪಡುವ ಮಣ್ಣೆತ್ತಿನ ಅಮಾವಾಸ್ಯೆ ಹಬ್ಬವು ರೈತರ ಬದುಕಿನೊಂದಿಗೆ ಬೆಸೆದುಕೊಂಡಿರುವ ವಿಶಿಷ್ಟ ಆಚರಣೆಯಾಗಿದೆ.



ಆಷಾಢ ಮಾಸದ ಅಮಾವಾಸ್ಯೆಯಂದು ಮಣ್ಣಿನಿಂದ ತಯಾರಿಸಿದ ಬಸವಣ್ಣನನ್ನು ಪೂಜಿಸಿ ಗೌರವಿಸುವ ಮೂಲಕ ರೈತರು ಕೃಷಿಗೆ ಆಧಾರವಾದ ಎತ್ತುಗಳ ಮೇಲಿನ ಕೃತಜ್ಞತೆಯನ್ನು ವ್ಯಕ್ತಪಡಿಸುತ್ತಾರೆ. ಕೃಷಿ, ಪಶುಸಂಪತ್ತು ಮತ್ತು ಪ್ರಕೃತಿ ಆರಾಧನೆ ಒಂದೇ ಹಬ್ಬದಲ್ಲಿ ಒಂದಾಗುವ ಈ ಸಂಪ್ರದಾಯ ಇಂದಿಗೂ ಗ್ರಾಮೀಣ ಭಾಗಗಳಲ್ಲಿ ಅಚ್ಚಳಿಯದೆ ಉಳಿದಿದೆ.

ಕೃಷಿ ಜೀವನದಲ್ಲಿ ಎತ್ತುಗಳು ರೈತನ ನಿಜವಾದ ಸಹಚರರು. ಹೊಲ ಉಳುಮೆ, ಬಿತ್ತನೆ, ಬೆಳೆ ಸಾಗಾಣಿಕೆ ಸೇರಿದಂತೆ ಕೃಷಿಯ ಪ್ರತಿಯೊಂದು ಹಂತದಲ್ಲೂ ಬಸವಣ್ಣನ ಪಾತ್ರ ಅನನ್ಯವಾಗಿದೆ. ಯಾಂತ್ರೀಕರಣದ ಯುಗ ಬಂದರೂ ಬಸವಣ್ಣನ ಮೇಲಿನ ಭಕ್ತಿ ಮತ್ತು ಗೌರವ ಮಾತ್ರ ಕಡಿಮೆಯಾಗಿಲ್ಲ.

ಮಣ್ಣಿನ ಬಸವಣ್ಣನನ್ನು ಪೂಜಿಸುವುದರಿಂದ ಮಳೆ ಸಮೃದ್ಧಿಯಾಗಿ ಸುರಿದು ಉತ್ತಮ ಬೆಳೆ ಬರುತ್ತದೆ ಎಂಬ ನಂಬಿಕೆ ಗ್ರಾಮೀಣ ಪ್ರದೇಶಗಳಲ್ಲಿ ಇಂದಿಗೂ ಜೀವಂತವಾಗಿದೆ.

ಮಣ್ಣೆತ್ತಿನ ಅಮಾವಾಸ್ಯೆಗೆ ಸುಮಾರು ಒಂದು ತಿಂಗಳ ಮುಂಚೆಯೇ ಕುಂಬಾರ ಸಮುದಾಯದವರು ಬಸವಣ್ಣನ ಮೂರ್ತಿಗಳ ತಯಾರಿಯಲ್ಲಿ ತೊಡಗುತ್ತಾರೆ. ಬೂದಿಹಾಳ ಗ್ರಾಮದ 80 ವರ್ಷದ ಕುಂಬಾರ ನೀಲಮ್ಮ ಅವರ ಪ್ರಕಾರ, ಡಂಬಳ ಕೆರೆಯ ಜಿಗುಟಾದ ಮಣ್ಣನ್ನು ತಂದು ಹದಗೊಳಿಸಿ ನಾಲ್ಕೈದು ಜನ ಸೇರಿ ಬಸವಣ್ಣನ ಮೂರ್ತಿಗಳನ್ನು ರೂಪಿಸುತ್ತಾರೆ. ಕೊಂಬು, ಕಿವಿ, ಕಣ್ಣುಗಳಿಗೆ ಆಕಾರ ನೀಡಿ, ಬಳಿಕ ಬಣ್ಣಗಳಿಂದ ಅಲಂಕರಿಸಲಾಗುತ್ತದೆ. ಹಿಂದೆ ಸಹಜ ಮಣ್ಣಿನ ಬಣ್ಣದಲ್ಲೇ ಮಾರಾಟವಾಗುತ್ತಿದ್ದ ಮೂರ್ತಿಗಳಿಗೆ ಈಗ ಆಕರ್ಷಕ ಬಣ್ಣಗಳ ಮೆರುಗು ನೀಡಲಾಗುತ್ತಿದ್ದು, ಜನರ ಬೇಡಿಕೆಯೂ ಹೆಚ್ಚಾಗಿದೆ.

ನರೇಗಲ್ಲ, ಜಕ್ಕಲಿ, ಬೂದಿಹಾಳ ಸೇರಿದಂತೆ ವಿವಿಧ ಗ್ರಾಮಗಳ ವಾರದ ಸಂತೆಗಳಲ್ಲಿ ಮಣ್ಣಿನ ಬಸವಣ್ಣಗಳ ಮಾರಾಟ ಜೋರಾಗಿರುತ್ತದೆ. ಒಂದು ಜೋಡಿ ಬಸವಣ್ಣ ₹40ರಿಂದ ₹150ರವರೆಗೆ ಮಾರಾಟವಾಗುತ್ತಿದ್ದು, ಈ ಹಬ್ಬ ಕುಂಬಾರ ಸಮುದಾಯದವರಿಗೆ ಉತ್ತಮ ಆದಾಯದ ಮೂಲವಾಗಿಯೂ ಪರಿಣಮಿಸಿದೆ.

ಹಬ್ಬದ ದಿನ ಮಹಿಳೆಯರು ಮನೆಗಳನ್ನು ಸ್ವಚ್ಛಗೊಳಿಸಿ ರಂಗೋಲಿ ಹಾಕಿ, ಮಣ್ಣಿನ ಬಸವಣ್ಣನನ್ನು ಪ್ರತಿಷ್ಠಾಪಿಸಿ ವಿಭೂತಿ, ಅರಿಶಿನ, ಕುಂಕುಮ, ಹೂವು, ಕರ್ಪೂರ ಹಾಗೂ ನೈವೇದ್ಯದೊಂದಿಗೆ ಭಕ್ತಿಪೂರ್ವಕವಾಗಿ ಪೂಜೆ ಸಲ್ಲಿಸುತ್ತಾರೆ. ಕುಟುಂಬದ ಎಲ್ಲ ಸದಸ್ಯರು, ವಿಶೇಷವಾಗಿ ಮಕ್ಕಳು, ಈ ಆಚರಣೆಯಲ್ಲಿ ಪಾಲ್ಗೊಳ್ಳುವುದರಿಂದ ಸಂಪ್ರದಾಯ ತಲೆಮಾರಿನಿಂದ ತಲೆಮಾರಿಗೆ ಸಾಗುತ್ತಿದೆ.

ಮಣ್ಣೆತ್ತಿನ ಅಮಾವಾಸ್ಯೆ ಕೇವಲ ಧಾರ್ಮಿಕ ಆಚರಣೆಯಲ್ಲ. ಅದು ರೈತ, ಬಸವಣ್ಣ, ಮಣ್ಣು ಮತ್ತು ಪ್ರಕೃತಿಯ ನಡುವಿನ ಅವಿನಾಭಾವ ಸಂಬಂಧವನ್ನು ಸಾರುವ ಜೀವಂತ ಸಂಸ್ಕೃತಿ. ಕೃಷಿಯ ಮೌಲ್ಯ, ಶ್ರಮದ ಗೌರವ ಮತ್ತು ಪರಿಸರದೊಂದಿಗೆ ಮಾನವನ ನಂಟನ್ನು ನೆನಪಿಸುವ ಈ ಹಬ್ಬ, ನಮ್ಮ ಗ್ರಾಮೀಣ ಬದುಕಿನ ಆತ್ಮವನ್ನೇ ಪ್ರತಿಬಿಂಬಿಸುವ ಅಪರೂಪದ ಸಾಂಸ್ಕೃತಿಕ ಪರಂಪರೆಯಾಗಿದೆ.

**– ಸಂಗಮೇಶ ಮೆಣಸಿಗಿ, ಜಕ್ಕಲಿ**

---

# ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿಯ ಪರಮೇಶ್ವರಪ್ಪ ಎಂ. ಬಳಿಗಾರ ಸರ್ಕಾರಿ ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ 202627ನೇ ಶೈಕ್ಷಣಿಕ ಸಾಲಿನ ಪಠ್ಯೇತರ ಚಟುವಟಿಕೆಗಳ ಉದ್ಘಾಟನೆ ಹಾಗೂ 202526ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ಮತ್ತು ಸನ್ಮಾನ ಕಾರ್ಯಕ್ರಮ ಶನಿವಾರ ನಡೆಯಿತು.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಒಟ್ಟು ₹1.10 ಲಕ್ಷ ನಗದು ಬಹುಮಾನ ವಿತರಿಸಿ ಗೌರವಿಸಲಾಯಿತು.

ನಿವೃತ್ತ ಉಪನ್ಯಾಸಕ ಎಸ್.ಎಸ್. ಅಂಗಡಿ ಮಾತನಾಡಿ, ವಿದ್ಯಾರ್ಥಿಗಳು ಶ್ರದ್ಧೆ, ಏಕಾಗ್ರತೆ ಹಾಗೂ ಗುರುಗಳ ಮಾರ್ಗದರ್ಶನದೊಂದಿಗೆ ಅಭ್ಯಾಸ ಮಾಡಿದರೆ ಗುರಿ ಸಾಧನೆ ಸಾಧ್ಯ. ಪಠ್ಯದ ಜೊತೆಗೆ ಕ್ರೀಡೆ, ಸಾಂಸ್ಕೃತಿಕ ಹಾಗೂ ಇತರ ಪಠ್ಯೇತರ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸುವುದರಿಂದ ನಾಯಕತ್ವ, ಶಿಸ್ತು ಮತ್ತು ಆತ್ಮವಿಶ್ವಾಸ ಬೆಳೆಯುತ್ತದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಎಸ್.ಟಿ. ಮುದಿಗೌಡರ ಮಾತನಾಡಿ, ಶೈಕ್ಷಣಿಕ ಸಾಧನೆಯ ಜೊತೆಗೆ ವ್ಯಕ್ತಿತ್ವ ವಿಕಸನಕ್ಕೂ ಪಠ್ಯೇತರ ಚಟುವಟಿಕೆಗಳು ಪೂರಕವಾಗಿವೆ. ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಬಳಿಗಾರ ಕುಟುಂಬದ ಶಿಕ್ಷಣ ಸೇವೆ ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಎನ್.ಎನ್. ನೆಗಳೂರ, ಮಂಜುನಾಥ ದೇಸಾಯಿ, ನಟರಾಜ ಪವಾಡದ, ರವಿ ಕೂಸನೂರ, ಗೋವಿಂದಸಾ ಬಡಿ, ಮಾಂತೇಶ ತಳವಾರ ಸೇರಿದಂತೆ ಸಿಡಿಸಿ ಸದಸ್ಯರು, ಪೋಷಕರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

---

# ಅತಿಥಿ ಉಪನ್ಯಾಸಕರ ಆಯ್ಕೆಗೆ ಆನ್‌ಲೈನ್ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು (ಸರ್ಕಾರಿ ಸಂಸ್ಕೃತ ಹಾಗೂ ಚಿತ್ರಕಲಾ ಕಾಲೇಜುಗಳು ಸೇರಿ) 202627ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರ ತಾತ್ಕಾಲಿಕ ಆಯ್ಕೆಗಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ಬಳಿಕ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರು, ಅತಿಥಿ ಗ್ರಂಥಪಾಲಕರು ಹಾಗೂ ಅತಿಥಿ ದೈಹಿಕ ಶಿಕ್ಷಣ ನಿರ್ದೇಶಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಿಕೊಳ್ಳಲಾಗುವುದು.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆ ಹಾಗೂ ತಿದ್ದುಪಡಿ (ಎಡಿಟ್) ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ಜುಲೈ 18 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ತಾತ್ಕಾಲಿಕ ಮೆರಿಟ್ ಪಟ್ಟಿಯನ್ನು ಜುಲೈ 19ರಂದು ಪ್ರಕಟಿಸಲಾಗುವುದು. ಬಳಿಕ ಜುಲೈ 19ರಿಂದ 22ರವರೆಗೆ ಅರ್ಜಿ ತಿದ್ದುಪಡಿಗೆ ಅವಕಾಶ ನೀಡಲಾಗಿದೆ.ತಾತ್ಕಾಲಿಕ ಕಾರ್ಯಭಾರ ಪಟ್ಟಿ ಜುಲೈ 25ರಂದು, ಕೌನ್ಸಿಲಿಂಗ್ ಮೆರಿಟ್ ಪಟ್ಟಿ ಹಾಗೂ ಕಾರ್ಯಭಾರ ಜುಲೈ 26ರಂದು ಪ್ರಕಟವಾಗಲಿದ್ದು, ಕಾಲೇಜು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳ ಅಂತಿಮ ಪಟ್ಟಿಯನ್ನು ಜುಲೈ 28ರಂದು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಯುಜಿಸಿ–2018ರ ಮಾರ್ಗಸೂಚಿಯಂತೆ ಸ್ನಾತಕೋತ್ತರ ಪದವಿಯಲ್ಲಿ ಶೇ.55 ಅಂಕ (ಎಸ್‌ಸಿ/ಎಸ್‌ಟಿ/ಒಬಿಸಿ/ವಿಶೇಷ ಚೇತನರಿಗೆ ಶೇ.50) ಗಳಿಸಿರಬೇಕು. ಜೊತೆಗೆ ಎನ್‌ಇಟಿ/ಎಸ್‌ಎಲ್‌ಇಟಿ/ಕೆ–ಸೆಟ್ ಅಥವಾ ಪಿಎಚ್‌ಡಿ ವಿದ್ಯಾರ್ಹತೆ ಕಡ್ಡಾಯವಾಗಿದೆ.

ಮೆರಿಟ್ ಪಟ್ಟಿಯನ್ನು ಸ್ನಾತಕೋತ್ತರ ಅಂಕಗಳು, ಹೆಚ್ಚುವರಿ ವಿದ್ಯಾರ್ಹತೆ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಲ್ಲಿಸಿರುವ ಸೇವೆ ಹಾಗೂ ವಿಶೇಷ ಚೇತನ ಅಭ್ಯರ್ಥಿಗಳಿಗೆ ನೀಡುವ ಹೆಚ್ಚುವರಿ ಅಂಕಗಳ ಆಧಾರದ ಮೇಲೆ ಸಿದ್ಧಪಡಿಸಲಾಗುವುದು.

202526ನೇ ಸಾಲಿನಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಹೊಸದಾಗಿ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ. ಆದರೆ ತಮ್ಮ ಅರ್ಜಿಯ ಮಾಹಿತಿಯನ್ನು ತಿದ್ದುಪಡಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್‌ಸೈಟ್‌ಗಳನ್ನು ಸಂಪರ್ಕಿಸುವಂತೆ ಇಲಾಖೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


---

# ತಿಲಕ ಪಾರ್ಕ್‌ನಲ್ಲಿ ಲಯನ್ಸ್ ಕ್ಲಬ್‌ನ ಸ್ವಚ್ಛತಾ ಅಭಿಯಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಲಯನ್ಸ್ ಕ್ಲಬ್ ಆಫ್ ಗದಗ–ಬೆಟಗೇರಿ ಹಾಗೂ ಗದಗ–ಬೆಟಗೇರಿ ನಗರಸಭೆ ಸಹಯೋಗದಲ್ಲಿ ನಗರದ ತಿಲಕ ಪಾರ್ಕ್‌ನಲ್ಲಿ ಭಾನುವಾರ ಆಯೋಜಿಸಿದ್ದ ಸ್ವಚ್ಛ ಭಾರತ ಅಭಿಯಾನ ಯಶಸ್ವಿಯಾಗಿ ನಡೆಯಿತು.

ಬೆಳಿಗ್ಗೆ 7 ಗಂಟೆಗೆ ಆರಂಭವಾದ ಅಭಿಯಾನದಲ್ಲಿ ಲಯನ್ಸ್ ಕ್ಲಬ್ ಪದಾಧಿಕಾರಿಗಳು, ಸದಸ್ಯರು, ನಗರಸಭೆ ಸಿಬ್ಬಂದಿ ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡು ಪಾರ್ಕ್ ಮತ್ತು ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಿದರು. ಅಲ್ಲದೆ, ಪರಿಸರ ಸಂರಕ್ಷಣೆ ಹಾಗೂ ಸ್ವಚ್ಛತೆ ಕಾಪಾಡುವ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಲಯನ್ಸ್ ಕ್ಲಬ್ ಅಧ್ಯಕ್ಷ ಪ್ರವೀಣ ವಾರಕರ, ಸ್ವಚ್ಛತೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಆಗಿದೆ. ಪರಿಸರ ಸಂರಕ್ಷಣೆ, ಆರೋಗ್ಯಕರ ಜೀವನಶೈಲಿ ಹಾಗೂ ಸ್ವಚ್ಛ ನಗರ ನಿರ್ಮಾಣಕ್ಕೆ ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಲಯನ್ಸ್ ಕ್ಲಬ್ ಕಾರ್ಯದರ್ಶಿ ಲಿಂಗರಾಜ ಬಿ. ತೋಟದ, ಖಜಾಂಚಿ ರೇಣುಕಪ್ರಸಾದ್ ಶಿಗ್ಲಿಮಠ, ಮಹಾನಗರ ಪಾಲಿಕೆ ಸದಸ್ಯ ನಾಗರಾಜ ತಳವಾರ, ಆರೋಗ್ಯಾಧಿಕಾರಿ ಆನಂದ ಬದಿ, ರಾಜಣ್ಣ ಮಲ್ಲಾಡದ, ರೇಣುಕಪ್ರಸಾದ್ ಹಿರೇಮಠ, ಶಿವಪ್ರಭು ನೀಲಗುಂದ, ವಿಷ್ಣುದಾಸ ಡಂಬಳ, ಆನಂದ ಪೋತ್ನೀಸ್, ಡಾ. ಜಗದೀಶ ಶಿರೋಳ, ಶ್ರೀನಿವಾಸ ಬಾಕಳೆ, ದತ್ತುಸಾ ಬೇವಿನಕಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಭಿಯಾನದ ಕೊನೆಯಲ್ಲಿ ಭಾಗವಹಿಸಿದವರು ನಗರವನ್ನು ಸ್ವಚ್ಛ ಹಾಗೂ ಹಸಿರಾಗಿಡುವ ಸಂಕಲ್ಪ ಕೈಗೊಂಡರು.

---

### ಒಬ್ಬರಿಗೊಂದು ಸಸಿ ಅಭಿಯಾನಕ್ಕೆ ಜಿಲ್ಲಾದ್ಯಂತ ಸ್ಪಂದನೆಗೆ ಕರೆ

# ಹಸಿರು ಗದಗಕ್ಕೆ ರೋಟರಿಯ ಮಹಾಸಂಕಲ್ಪ!

**ವಿಜಯಸಾಕ್ಷಿ ಸುದ್ದಿ, ಗದಗ**

ಪರಿಸರ ಸಂರಕ್ಷಣೆ ಸರ್ಕಾರದ ಹೊಣೆ ಮಾತ್ರವಲ್ಲ, ಪ್ರತಿಯೊಬ್ಬ ನಾಗರಿಕನ ಸಾಮಾಜಿಕ ಜವಾಬ್ದಾರಿಯೂ ಆಗಿದೆ ಎಂಬ ಸಂದೇಶದೊಂದಿಗೆ ರೋಟರಿ ಜಿಲ್ಲಾ 3170 ವತಿಯಿಂದ ಗದಗ ಜಿಲ್ಲೆಯಾದ್ಯಂತ ಬೃಹತ್ ವೃಕ್ಷಾರೋಪಣ ಅಭಿಯಾನಕ್ಕೆ ಭಾನುವಾರ ಚಾಲನೆ ನೀಡಲಾಯಿತು.

ಜುಲೈ 12ರಿಂದ 19ರವರೆಗೆ ಜಿಲ್ಲೆಯ ವಿವಿಧ ಭಾಗಗಳಲ್ಲಿ ನಡೆಯಲಿರುವ ಈ ಹಸಿರು ಅಭಿಯಾನಕ್ಕೆ ಗದಗ–ಬೆಟಗೇರಿ ರೋಟರಿ ಕ್ಲಬ್‌ನ ಐಕೇರ್ ಸೆಂಟರ್ ಆವರಣದಲ್ಲಿ ಸಸಿ ನೆಟ್ಟು, ನೀರೆರೆಯುವ ಮೂಲಕ ವಿಧ್ಯುಕ್ತ ಚಾಲನೆ ನೀಡಲಾಯಿತು.




ಗದಗ–ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ. ಪ್ರದೀಪ ಉಗಲಾಟ ಮಾತನಾಡಿ, ಹವಾಮಾನ ವೈಪರೀತ್ಯ, ಅರಣ್ಯ ನಾಶ ಹಾಗೂ ಪರಿಸರ ಅಸಮತೋಲನದಂತಹ ಸವಾಲುಗಳನ್ನು ಎದುರಿಸಲು ವೃಕ್ಷಾರೋಪಣವೇ ಪರಿಣಾಮಕಾರಿ ಮಾರ್ಗವಾಗಿದೆ ಎಂದರು.

ರೋಟರಿ ಕೇವಲ ಸಸಿ ನೆಡುವ ಕಾರ್ಯಕ್ರಮಕ್ಕೆ ಸೀಮಿತವಾಗದೇ, ನೆಟ್ಟ ಗಿಡಗಳ ಸಂರಕ್ಷಣೆಗೆ ವಿಶೇಷ ಯೋಜನೆ ರೂಪಿಸಿದೆ. ನಿಯಮಿತ ನೀರುಣಿಕೆ, ಬೇಲಿ ಅಳವಡಿಕೆ ಹಾಗೂ ನಿರಂತರ ಮೇಲ್ವಿಚಾರಣೆಯ ಮೂಲಕ ಗಿಡಗಳನ್ನು ಮರಗಳಾಗಿ ಬೆಳೆಸಲು ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಜಿಲ್ಲೆಯಾದ್ಯಂತ ನಡೆಯಲಿರುವ ಅಭಿಯಾನದಲ್ಲಿ ರೋಟರಾಕ್ಟ್, ಇಂಟರಾಕ್ಟ್ ಸದಸ್ಯರು, ವಿದ್ಯಾರ್ಥಿಗಳು, ಶಿಕ್ಷಕರು, ಸ್ವಯಂಸೇವಾ ಸಂಸ್ಥೆಗಳು ಹಾಗೂ ಪರಿಸರ ಪ್ರೇಮಿಗಳು ಸಕ್ರಿಯವಾಗಿ ಪಾಲ್ಗೊಂಡು ಯಶಸ್ವಿಗೊಳಿಸುವಂತೆ ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಡಾ. ಧನೇಶ ದೇಸಾಯಿ, ಡಾ. ರಾಜಶೇಖರ ಬಳ್ಳಾರಿ, ಸುರೇಶ ಕುಂಬಾರ ಹಾಗೂ ಮಂಜುಳಾ ಅಕ್ಕಿ ಮಾತನಾಡಿ, ಪರಿಸರ ಉಳಿಸುವ ಕೆಲಸದಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಅರಣ್ಯಾಧಿಕಾರಿ ಎನ್. ಜಯರಾಮ್ ಅವರನ್ನು ಸನ್ಮಾನಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ರೋಟರಿ ಕೈಗೊಂಡಿರುವ ವೃಕ್ಷಾರೋಪಣ ಅಭಿಯಾನಕ್ಕೆ ಸಮಾಜದ ಎಲ್ಲ ವರ್ಗದವರು ಬೆಂಬಲ ನೀಡಬೇಕು ಎಂದು ಮನವಿ ಮಾಡಿದರು.

ಸಂತೋಷ ಅಕ್ಕಿ ಅತಿಥಿಗಳನ್ನು ಪರಿಚಯಿಸಿದರು. ಬಾಲಕೃಷ್ಣ ಕಾಮತ್ ಕಾರ್ಯಕ್ರಮ ನಿರೂಪಿಸಿದರು. ಕ್ಲಬ್ ಕಾರ್ಯದರ್ಶಿ ಅಕ್ಷಯ್ ಶೆಟ್ಟಿ ವಂದಿಸಿದರು. ರೋಟರಿ ಕ್ಲಬ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

### ಹಸಿರು ಅಭಿಯಾನದ ಪ್ರಮುಖ ಅಂಶಗಳು

1. ಜುಲೈ 12ರಿಂದ 19ರವರೆಗೆ ಜಿಲ್ಲೆಯಾದ್ಯಂತ ವೃಕ್ಷಾರೋಪಣ
2. ಪ್ರತಿಯೊಬ್ಬರೂ ಕನಿಷ್ಠ ಒಂದು ಸಸಿ ನೆಟ್ಟು ಪೋಷಿಸಲು ಕರೆ
3. ಗದಗ ಜಿಲ್ಲಾ ಕ್ರೀಡಾಂಗಣ ಎದುರಿನ ಇದುರ ರೋಟರಿ ಕ್ಲಬ್‌ನಲ್ಲಿ ಒಬ್ಬರಿಗೊಂದು ಸಸಿ ಉಚಿತ ವಿತರಣೆ
4. ನೆಟ್ಟ ಗಿಡಗಳ ಸಂರಕ್ಷಣೆಗೆ ರೋಟರಿಯಿಂದ ನಿರಂತರ ಮೇಲ್ವಿಚಾರಣೆ

**ಗಿಡ ನೆಡುವುದಷ್ಟೇ ಸಾಕಾಗುವುದಿಲ್ಲ. ಅದು ಮರವಾಗಿ ಬೆಳೆಯುವವರೆಗೆ ಅದರ ಸಂರಕ್ಷಣೆ ಮತ್ತು ಪೋಷಣೆಯ ಜವಾಬ್ದಾರಿಯನ್ನೂ ನಾವು ವಹಿಸಿಕೊಳ್ಳಬೇಕು.**

**– ಡಾ. ಪ್ರದೀಪ ಉಗಲಾಟ**

### 15ನೇ ಹಣಕಾಸು ಆಯೋಗದ ಅನುದಾನ ವಿಳಂಬ | ಕುಡಿಯುವ ನೀರು, ಬೀದಿದೀಪ ನಿರ್ವಹಣೆಯೂ ಸಂಕಷ್ಟ

# ಹಣವಿಲ್ಲದೆ ಹೈರಾಣಾದ ಗ್ರಾಮ ಪಂಚಾಯಿತಿಗಳು

**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿ ತಾಲೂಕಿನ ಗ್ರಾಮ ಪಂಚಾಯಿತಿಗಳು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, 15ನೇ ಹಣಕಾಸು ಆಯೋಗದ ಅನುದಾನ ಬಿಡುಗಡೆಯಾಗದ ಕಾರಣ ಕುಡಿಯುವ ನೀರು, ಬೀದಿದೀಪ, ರಸ್ತೆ ದುರಸ್ತಿ, ಸ್ವಚ್ಛತೆ ಸೇರಿದಂತೆ ಮೂಲಭೂತ ಸೇವೆಗಳ ನಿರ್ವಹಣೆಯೇ ದುಸ್ತರವಾಗಿದೆ. 2025-26 ಹಾಗೂ 2026-27ನೇ ಸಾಲಿನ ಅನುದಾನ ಇನ್ನೂ ಬಿಡುಗಡೆಯಾಗದ ಹಿನ್ನೆಲೆಯಲ್ಲಿ ಪಂಚಾಯಿತಿಗಳು ತೆರಿಗೆ ಸಂಗ್ರಹದ ಹಣದಲ್ಲೇ ಆಡಳಿತ ನಡೆಸುತ್ತಿವೆ. ಒಂದು ವರ್ಷದಿಂದ ಖರೀದಿಸಿದ ಸಾಮುಗ್ರಿಗಳ ಬಿಲ್ ಪಾವತಿಸಲು ಸಾಧ್ಯವಾಗದೆ, ಗುತ್ತಿಗೆದಾರರು ಮತ್ತು ಪೂರೈಕೆದಾರರಿಂದ ಅಧಿಕಾರಿಗಳ ಮೇಲೆ ಒತ್ತಡ ಹೆಚ್ಚಾಗಿದೆ.

ಇದರ ಜೊತೆಗೆ ಇ-ಸ್ವತ್ತು ತಂತ್ರಾಂಶದ ನಿರಂತರ ತಾಂತ್ರಿಕ ದೋಷ, ಸಿಬ್ಬಂದಿ ಕೊರತೆ ಹಾಗೂ ಹೆಚ್ಚುತ್ತಿರುವ ಸಾರ್ವಜನಿಕ ಒತ್ತಡದಿಂದ ಪಂಚಾಯಿತಿ ಆಡಳಿತ ಮತ್ತಷ್ಟು ಸಂಕಷ್ಟಕ್ಕೀಡಾಗಿದೆ.




15ನೇ ಹಣಕಾಸು ಆಯೋಗದ ಅನುದಾನ ಬಂದಿಲ್ಲ. ತೆರಿಗೆ ಸಂಗ್ರಹದ ಹಣದಲ್ಲೇ ಕುಡಿಯುವ ನೀರು, ರಸ್ತೆ, ಚರಂಡಿ ಹಾಗೂ ಸಿಬ್ಬಂದಿ ವೇತನ ನಿರ್ವಹಿಸುತ್ತಿದ್ದೇವೆ. ಅನುದಾನ ಬಿಡುಗಡೆಯಾಗದಿದ್ದರೆ ಗ್ರಾಮಗಳ ಅಭಿವೃದ್ಧಿ ಸಂಪೂರ್ಣ ಕುಂಠಿತವಾಗಲಿದೆ.

**- ಹೆಸರು ಬಹಿರಂಗಪಡಿಸಲು ಇಚ್ಛಿಸದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ,** ಮುಂಡರಗಿ ತಾಲೂಕು

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಂಘವು ತಕ್ಷಣ ಅನುದಾನ ಬಿಡುಗಡೆ, ಖಾಲಿ ಹುದ್ದೆಗಳ ಭರ್ತಿ, ತಾಂತ್ರಿಕ ಸಮಸ್ಯೆಗಳ ನಿವಾರಣೆ ಹಾಗೂ ಸಾರ್ವಜನಿಕ ಸೇವೆ ಸುಗಮಗೊಳಿಸಲು ರಾಜ್ಯ ಸರ್ಕಾರ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದೆ.

# ಸಕ್ರೋಜಿ, ಶಿವನಗೌಡ ಪಾಟೀಲರಿಗೆ ಭಾವಪೂರ್ಣ ನುಡಿನಮನ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಈಚೆಗೆ ನಿಧನರಾದ ಪಟ್ಟಣದ ಹಿರಿಯರಾದ ಮೇಜರ್ ರಾಮಣ್ಣ ಸಕ್ರೋಜಿ ಹಾಗೂ ಶಿವನಗೌಡ ಪಾಟೀಲ ಅವರಿಗೆ ಪಟ್ಟಣದ ಗಣೇಶ ದೇವಸ್ಥಾನದಲ್ಲಿ ವಿವಿಧ ಸಂಘಟನೆಗಳ ವತಿಯಿಂದ ಭಾವಪೂರ್ಣ ನುಡಿನಮನ ಸಲ್ಲಿಸಲಾಯಿತು.

ಸಭೆಯಲ್ಲಿ ಮಾತನಾಡಿದ ಗಣ್ಯರು, ರಾಮಣ್ಣ ಸಕ್ರೋಜಿ ಅವರು ನಿವೃತ್ತ ಸೈನಿಕರ ಸಂಘದ ಸ್ಥಾಪನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದು, ಕೃಷಿ ಕ್ಷೇತ್ರದಲ್ಲೂ ಹೊಸ ಪ್ರಯೋಗಗಳ ಮೂಲಕ ಮಾದರಿಯಾಗಿದ್ದರು ಎಂದು ಸ್ಮರಿಸಿದರು. ಶಿವನಗೌಡ ಪಾಟೀಲ ಅವರು ಪಕ್ಷಾತೀತವಾಗಿ ಪಟ್ಟಣದ ಅಭಿವೃದ್ಧಿಗೆ ಶ್ರಮಿಸಿದ ಜನಪರ ವ್ಯಕ್ತಿಯಾಗಿದ್ದರು ಎಂದು ಕೊಂಡಾಡಿದರು.

ಶ್ರದ್ಧಾಂಜಲಿ ಸಭೆಯಲ್ಲಿ ಅಶೋಕ ಬೇವಿನಕಟ್ಟಿ, ಶಿವಪುತ್ರಪ್ಪ ಸಂಗನಾಳ, ಮೃತ್ಯುಂಜಯ ಧಡೇಸೂರಮಠ, ಸುರೇಶ ಹಳ್ಳಿಕೇರಿ, ಉಮೇಶ ಸಂಗನಾಳಮಠ, ಡಾ. ರಾಜೇಂದ್ರ, ಗಚ್ಚಿನಮಠ ಸೇರಿದಂತೆ ಹಲವರು ಮಾತನಾಡಿ ಅಗಲಿದ ಇಬ್ಬರ ಸೇವೆಯನ್ನು ಸ್ಮರಿಸಿದರು.

ಸಭೆಯ ಕೊನೆಯಲ್ಲಿ ಎರಡು ನಿಮಿಷಗಳ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

### ₹2 ಲಕ್ಷ ವೆಚ್ಚದ ಸ್ಮಾರ್ಟ್ ತರಗತಿ ಉದ್ಘಾಟನೆ | ತಂತ್ರಜ್ಞಾನ ಆಧಾರಿತ ಕಲಿಕೆಗೆ ಎಸ್.ವಿ. ಸಂಕನೂರ ಒತ್ತು

# ಡಿಜಿಟಲ್ ಶಿಕ್ಷಣಕ್ಕೆ ಮತ್ತೊಂದು ಹೆಜ್ಜೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ತಂತ್ರಜ್ಞಾನ ಆಧಾರಿತ ಶಿಕ್ಷಣವು ವಿದ್ಯಾರ್ಥಿಗಳ ಕಲಿಕೆಯನ್ನು ಹೆಚ್ಚು ಪರಿಣಾಮಕಾರಿ ಹಾಗೂ ಆಸಕ್ತಿದಾಯಕವಾಗಿಸುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ ತಮ್ಮ ಶಾಸಕರ ಅನುದಾನದ ₹2 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಸ್ಮಾರ್ಟ್ ತರಗತಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಚಿತ್ರ, ವಿಡಿಯೊ ಹಾಗೂ ಡಿಜಿಟಲ್ ಕಲಿಕಾ ಸಂಪನ್ಮೂಲಗಳ ಮೂಲಕ ಬೋಧನೆ ನಡೆಸುವುದರಿಂದ ವಿದ್ಯಾರ್ಥಿಗಳ ಜ್ಞಾನ ವಿಸ್ತಾರವಾಗುತ್ತದೆ. ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಈ ಸೌಲಭ್ಯದ ಸಂಪೂರ್ಣ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.




ಕಾರ್ಯಕ್ರಮದಲ್ಲಿ ನಿಂಗನಗೌಡ ಲಕ್ಕನಗೌಡ್ರ, ಶಶಿಧರ ಸಂಕನಗೌಡ್ರ, ಉಮೇಶ್ ಸಂಗನಾಳಮಠ, ಆನಂದ ಕುಲಕರ್ಣಿ, ಶಿವಶಿಂಪರ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ವಹಿಸಿದ್ದರು. ಬಿ.ಡಿ. ಯರಗೊಪ್ಪ ಕಾರ್ಯಕ್ರಮ ನಿರೂಪಿಸಿದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸ್ಮಾರ್ಟ್ ತರಗತಿಗಳಿಂದ ವಿದ್ಯಾರ್ಥಿಗಳಲ್ಲಿ ವಿಷಯದ ಅರಿವು, ಜ್ಞಾನ ಮತ್ತು ಕಲಿಕೆಯ ಆಸಕ್ತಿ ಹೆಚ್ಚುತ್ತದೆ. ಭವಿಷ್ಯದ ಶಿಕ್ಷಣಕ್ಕೆ ತಂತ್ರಜ್ಞಾನ ಅನಿವಾರ್ಯ.

**- ಎಸ್.ವಿ. ಸಂಕನೂರ,** ವಿಧಾನ ಪರಿಷತ್ ಸದಸ್ಯ

# ರಾಜೋಟೇಶ್ವರ ಶ್ರೀಗಳ ಆರೋಗ್ಯ ವಿಚಾರಿಸಿದ ಜೆಡಿಎಸ್ ಮುಖಂಡರು



**ವಿಜಯಸಾಕ್ಷಿ ಸುದ್ದಿ, ಗದಗ**

33 ದಿನಗಳ ಶಿವಯೋಗ ಸಮಾಧಿ ಅನುಷ್ಠಾನ ಪೂರ್ಣಗೊಳಿಸಿ ಚಿಕಿತ್ಸೆ ಪಡೆಯುತ್ತಿರುವ ಜಗದ್ಗುರು ಶ್ರೀ ಷ.ಬ್ರ. ಡಾ. ರಾಜೋಟೇಶ್ವರ ಶಿವಾಚಾರ್ಯ ಮಹಾಸ್ವಾಮೀಜಿಯವರನ್ನು ಜೆಡಿಎಸ್ ಮುಖಂಡರು ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು.

ಈ ವೇಳೆ ಕೇಂದ್ರ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಅವರ ಶುಭ ಸಂದೇಶವನ್ನು ಶ್ರೀಗಳಿಗೆ ತಲುಪಿಸಲಾಯಿತು. ಜುಲೈ 4 ಮತ್ತು 5ರಂದು ಅಂತೂರು-ಬೆಂತೂರದಲ್ಲಿ ನಡೆದ ಕಾರ್ಯಕ್ರಮಕ್ಕೆ ಪೂರ್ವನಿಯೋಜಿತ ಕಾರ್ಯಕ್ರಮಗಳಿಂದ ಆಗಮಿಸಲು ಸಾಧ್ಯವಾಗಿಲ್ಲ ಎಂದು ತಿಳಿಸಿರುವ ಕುಮಾರಸ್ವಾಮಿ, ಲೋಕಕಲ್ಯಾಣಕ್ಕಾಗಿ ನಡೆದ ಮಹಾಸಂಕಲ್ಪ ಯಶಸ್ವಿಯಾಗಲೆಂದು ಶುಭ ಹಾರೈಸಿದ್ದಾರೆ.

ಜೆಡಿಎಸ್ ಮುಖಂಡರು ಶ್ರೀಗಳ ಶೀಘ್ರ ಗುಣಮುಖತೆಯನ್ನು ಹಾರೈಸಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಎಂ.ಎಸ್. ಪರ್ವತಗೌಡ್ರ, ಖುರ್ಷಿದ ಅಹ್ಮದ್ ಡಾಲಾಯತ, ರಮೇಶ ಎಫ್. ಹುಣಸೀಮರದ, ಮಹಮ್ಮದ್ ನಯೀಮ್ ಡಾಲಾಯತ, ದೇವಪ್ಪ ಈ. ಮಲ್ಲಸಮುದ್ರ, ಸಂದೀಪ ನವಲೇಕರ್ ಹಾಗೂ ಸಂತೋಷ ಪಾಟೀಲ ಉಪಸ್ಥಿತರಿದ್ದರು.

### ಜಿಲ್ಲಾಸ್ಪತ್ರೆಗೆ ಭೇಟಿ ನೀಡಿ ಯೋಗಕ್ಷೇಮ ವಿಚಾರಿಸಿದ ದಿಂಗಾಲೇಶ್ವರ ಶ್ರೀಗಳು

# ಶಿವಯೋಗ ಸಾಧನೆ ಅಪರೂಪದ ಆಧ್ಯಾತ್ಮಿಕ ಅಧ್ಯಾಯ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಯೋಗಗಳಲ್ಲಿ ಹಠಯೋಗ, ಮಂತ್ರಯೋಗ, ಲಯಯೋಗ ಹಾಗೂ ರಾಜಯೋಗಗಳಂತೆ ಶಿವಯೋಗವೂ ಅತ್ಯುನ್ನತ ಯೋಗಮಾರ್ಗವಾಗಿದ್ದು, ಅಂತೂರ-ಬೆಂತೂರಿನ ಪೂಜ್ಯ ರಾಜೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು 33 ದಿನಗಳ ಕಾಲ ಕೈಗೊಂಡ ಶಿವಯೋಗ ಸಮಾಧಿ ಸಾಧನೆ ಅಪರೂಪದ ಆಧ್ಯಾತ್ಮಿಕ ಸಾಧನೆಯಾಗಿದೆ ಎಂದು ಶಿರಹಟ್ಟಿಯ ಜಗದ್ಗುರು ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಹೇಳಿದರು.

ಗದಗ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಪೂಜ್ಯ ರಾಜೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಆರೋಗ್ಯ ವಿಚಾರಿಸಿದ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಶಿವಯೋಗದ ಮಹತ್ವವನ್ನು ವಿವರಿಸಿದರು.



ಹಠಯೋಗ, ಮಂತ್ರಯೋಗ, ಲಯಯೋಗ ಹಾಗೂ ರಾಜಯೋಗಗಳು ತ್ಯಾಗ ಮತ್ತು ನಿಯಮಗಳ ಮೂಲಕ ಸಾಧನೆಗೆ ಒತ್ತು ನೀಡಿದರೆ, ಶಿವಯೋಗವು ಬದುಕಿನ ಮಧ್ಯೆಯೇ ಆತ್ಮಸಾಕ್ಷಾತ್ಕಾರ ಸಾಧಿಸುವ ಮಾರ್ಗವನ್ನು ತೋರಿಸುತ್ತದೆ. ಪೂಜ್ಯ ರಾಜೋಟೇಶ್ವರ ಶ್ರೀಗಳು ಸಮಾಜದ ಮಧ್ಯೆಯೇ ಇದ್ದುಕೊಂಡು ಶಿವಯೋಗ ಸಾಧನೆ ಮಾಡಿರುವುದು ವಿಶೇಷ ಎಂದು ಹೇಳಿದರು.

ಹಿಂದೆ ಬೂದೀಶ್ವರ ಸ್ವಾಮೀಜಿಗಳು ದೀರ್ಘಾಯುಷ್ಯ ಹೊಂದಲು ಯೋಗಸಾಧನೆಯೇ ಪ್ರಮುಖ ಕಾರಣವಾಗಿತ್ತು ಎಂಬ ನಂಬಿಕೆ ಇದೆ. ಅದೇ ಪರಂಪರೆಯಲ್ಲಿ ರಾಜೋಟೇಶ್ವರ ಶ್ರೀಗಳ ಸಾಧನೆಯೂ ಆಧ್ಯಾತ್ಮಿಕ ಕ್ಷೇತ್ರದಲ್ಲಿ ವಿಶೇಷ ಸ್ಥಾನ ಪಡೆಯಲಿದೆ ಎಂದು ಅಭಿಪ್ರಾಯಪಟ್ಟರು.

ಯೋಗವು ಕೇವಲ ಧ್ಯಾನ ಅಥವಾ ತಪಸ್ಸಿಗೆ ಸೀಮಿತವಲ್ಲ; ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡುವ ಜೀವನ ಪದ್ಧತಿಯಾಗಿದೆ. ಪ್ರತಿಯೊಬ್ಬರೂ ಯೋಗವನ್ನು ಅಳವಡಿಸಿಕೊಂಡರೆ ರೋಗಗಳಿಂದ ದೂರವಿದ್ದು ಆರೋಗ್ಯಯುತ ಜೀವನ ನಡೆಸಬಹುದು ಎಂದು ದಿಂಗಾಲೇಶ್ವರ ಶ್ರೀಗಳು ತಿಳಿಸಿದರು.

# ನಿಧನ

## ವೀರನಗೌಡ ಪಾಟೀಲ

**ಲಕ್ಷ್ಮೇಶ್ವರ:** ತಾಲೂಕಿನ ರಾಮಗೇರಿ ಗ್ರಾಮದ ಶಿಕ್ಷಣ ಪ್ರೇಮಿ ಹಾಗೂ ಭೂದಾನಿ ವೀರನಗೌಡ ಬಿ. ಪಾಟೀಲ (84) ಅವರು ಭಾನುವಾರ ನಿಧನರಾದರು.

ಮೃತರು ಪತ್ನಿ, ಡಿವೈಎಸ್‌ಪಿ ಶಂಕರಗೌಡ ಪಾಟೀಲ ಸೇರಿದಂತೆ ಪುತ್ರ, ಪುತ್ರಿ ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಅವರ ನಿಧನಕ್ಕೆ ಗ್ರಾಮಸ್ಥರು, ಶಿಕ್ಷಣ ಕ್ಷೇತ್ರದ ಗಣ್ಯರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಸಂತಾಪ ಸೂಚಿಸಿದ್ದಾರೆ.



### ಪ್ರತಿಭಾವಂತರಿಗೆ ಸನ್ಮಾನ; ಸಮಾಜಕ್ಕೆ ಕೊಡುಗೆ ನೀಡುವ ಮನೋಭಾವ ಬೆಳೆಸಿಕೊಳ್ಳಿ

# ಸಾಧನೆ ಸಾಧಕರ ಸ್ವತ್ತು-ಶ್ರಮ ಮತ್ತು ಶಿಸ್ತೇ ಯಶಸ್ಸಿನ ಗುಟ್ಟು




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸಾಧನೆ ಎಂಬುದು ಸಾಧಕರ ಸ್ವತ್ತು, ಸೋಮಾರಿಗಳದ್ದಲ್ಲ. ಗುರಿ, ಕಠಿಣ ಪರಿಶ್ರಮ ಮತ್ತು ಶಿಸ್ತು ಇದ್ದರೆ ಯಾವುದೇ ಎತ್ತರವನ್ನು ತಲುಪಬಹುದು ಎಂದು ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಕುರಿ ಶಿವಮೂರ್ತಿ ಹೇಳಿದರು.

ಪಟ್ಟಣದ ಕೊಟ್ಟೂರೇಶ್ವರ ಚಿತ್ರಮಂದಿರದಲ್ಲಿ ತಾಲೂಕು ಕುರುಬರ ಸಂಘ, ಕನಕ ನೌಕರರ ಸಂಘ ಹಾಗೂ ಕನಕ ಸೇನೆ ಸಹಯೋಗದಲ್ಲಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಹೆಚ್ಚು ಅಂಕ ಗಳಿಸುವುದಷ್ಟೇ ಅಲ್ಲ, ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳುವುದೂ ಮುಖ್ಯವಾಗಿದೆ. ಮಕ್ಕಳ ಆಸಕ್ತಿ ಮತ್ತು ಸಾಮರ್ಥ್ಯಕ್ಕೆ ಅನುಗುಣವಾಗಿ ಶಿಕ್ಷಣ ಕಲಿಸಲು ಪೋಷಕರು ಅವಕಾಶ ಮಾಡಿಕೊಡಬೇಕು. ವಿದ್ಯಾರ್ಥಿಗಳು ಸಮಾಜಕ್ಕೆ ಮಾದರಿಯಾಗಬೇಕು. ಸಮಾಜ ನಮಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ, ಸಮಾಜಕ್ಕೆ ನಾವು ಏನು ಕೊಟ್ಟಿದ್ದೇವೆ ಎಂಬ ಚಿಂತನೆ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ 90ಕ್ಕೂ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ನಿಕಟ ಪೂರ್ವ ಅಧ್ಯಕ್ಷ ಬುಡ್ಡಿ ಬಸವರಾಜ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಹಿರಿಯ ಪತ್ರಕರ್ತ ಉಜ್ಜಿನಿ ರುದ್ರಪ್ಪ, ಸಮಾಜದ ಮುಖಂಡರಾದ ಮುಟಗನಹಳ್ಳಿ ಕೊಟ್ರೇಶ್ ಹಾಗೂ ಕನ್ನಿಹಳ್ಳಿ ಚಂದ್ರಶೇಖರ್ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ನಂದಿಪುರ ಡಾ. ಮಹೇಶ್ವರ ಸ್ವಾಮೀಜಿ ಹಾಗೂ ಉತ್ತಂಗಿ ಸೋಮಶಂಕರ ಸ್ವಾಮೀಜಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಕುರುಬರ ಸಂಘದ ಅಧ್ಯಕ್ಷ ಮೈನಹಳ್ಳಿ ಶಿವರಾಜ್ ವಹಿಸಿದ್ದರು.

ಈ ಸಂದರ್ಭದಲ್ಲಿ ಕುಲಗುರು ಕೊಟ್ರಯ್ಯ ಒಡೆಯರ್, ಕೆ. ಮೈಲಾರಪ್ಪ, ಜಳಕಿ ಗುರುಸಿದ್ದಪ್ಪ, ಶಿವಾನಂದಪ್ಪ, ಐಟಿ ಕೊಟ್ರೇಶ್, ಕೋಗಳಿ ಹನುಮಂತಪ್ಪ, ಬಣಕಾರ ಗೋಣೆಪ್ಪ, ಹುಲಿಮನಿ ಗೂಳಪ್ಪ, ಪೋಟೋ ರಾಮಣ್ಣ, ಭಂಡಾರಿ ಭರಮಪ್ಪ, ಹುಡೆದ ಹುಲುಗಪ್ಪ, ಕನಕ ನೌಕರರ ಸಂಘದ ತಾಲೂಕು ಅಧ್ಯಕ್ಷ ಮೈನಹಳ್ಳಿ ಮಂಜುನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಆಂಜನೇಯ ವಕೀಲರು, ಮುರ್ನಾಳ ಹಾಗೂ ದೇವೇಂದ್ರ, ಹೊಸಮನಿ ನಿರೂಪಿಸಿದರು. ವಿದ್ಯಾರ್ಥಿನಿ ಭೂಮಿಕ ಹಾಗೂ ಮಹಾಂತೇಶ್ ತಂಡದವರ ಪ್ರಾರ್ಥನೆ ಮತ್ತು ಭಾವಗೀತೆಗಳು ಕಾರ್ಯಕ್ರಮಕ್ಕೆ ಮೆರುಗು ತಂದವು.

ಕಠಿಣ ಪರಿಶ್ರಮದಿಂದ ಉತ್ತಮ ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಉದ್ದೇಶ, ಮುಂದಿನ ವಿದ್ಯಾರ್ಥಿಗಳಿಗೆ ಪ್ರೇರಣೆ ಮತ್ತು ಸ್ಫೂರ್ತಿ ನೀಡುವುದಾಗಿದೆ.

**- ಕುರಿ ಶಿವಮೂರ್ತಿ**

# ಕೃಷಿ ಪ್ರಶಸ್ತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕೃಷಿ ಕ್ಷೇತ್ರದಲ್ಲಿ ಉತ್ತಮ ಉತ್ಪಾದನೆ ಸಾಧಿಸಿರುವ ರೈತರು ಹಾಗೂ ರೈತ ಮಹಿಳೆಯರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ 2026-27ನೇ ಸಾಲಿನ ಕೃಷಿ ಪ್ರಶಸ್ತಿ ಯೋಜನೆ ಅಡಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಕೃಷಿ ಉತ್ಪಾದನೆ ಮತ್ತು ಉತ್ಪಾದಕತೆ ಹೆಚ್ಚಿಸುವ ಜೊತೆಗೆ ರೈತರಲ್ಲಿ ಆರೋಗ್ಯಕರ ಸ್ಪರ್ಧಾತ್ಮಕ ಮನೋಭಾವ ಬೆಳೆಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ. ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಆಯ್ಕೆಯಾಗುವ ರೈತರಿಗೆ ಕೃಷಿ ಪ್ರಶಸ್ತಿ ಹಾಗೂ ನಗದು ಬಹುಮಾನ ನೀಡಲಾಗುತ್ತದೆ.ಗದಗ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನ ಹೆಸರು (ಮಳೆಯಾಶ್ರಿತ), ಗೋವಿನ ಜೋಳ (ಮಳೆಯಾಶ್ರಿತ) ಹಾಗೂ ಶೇಂಗಾ (ಮಳೆಯಾಶ್ರಿತ) ಬೆಳೆಗಳಿಗೆ ಬೆಳೆ ಸ್ಪರ್ಧೆ ನಡೆಸಲಾಗುತ್ತಿದೆ.ಅರ್ಜಿ ಸಲ್ಲಿಸಲು ಎಫ್‌ಐಡಿ (ಊಖಿಐಖಿ ಐಈ) ಕಡ್ಡಾಯವಾಗಿದ್ದು, ಪಹಣಿ, ರೈತರ ಭಾವಚಿತ್ರ, ಗುರುತಿನ ಚೀಟಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ರೈತರಾದರೆ ಜಾತಿ ಪ್ರಮಾಣಪತ್ರ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಯಾವುದೇ ಶುಲ್ಕ ಇರುವುದಿಲ್ಲ. ಆಗಸ್ಟ್ 30, 2026 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಧಾರವಾಡ ಹೈಕೋರ್ಟ್ ಪೀಠದಲ್ಲಿ ಅಪಘಾತ, ಭೂಸ್ವಾಧೀನ, ಆಸ್ತಿ ಹಾಗೂ ಸಾರಿಗೆ ನೌಕರರ ಪ್ರಕರಣಗಳಿಗೆ ಪರಿಹಾರ

# ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ₹16.62 ಕೋಟಿ ಮೊತ್ತದ ಪ್ರಕರಣ ಇತ್ಯರ್ಥ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕರ್ನಾಟಕ ಉಚ್ಚ ನ್ಯಾಯಾಲಯದ ಧಾರವಾಡ ಪೀಠದಲ್ಲಿ ಜುಲೈ 11ರಂದು ನಡೆದ ದ್ವಿತೀಯ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಒಟ್ಟು 366 ಪ್ರಕರಣಗಳನ್ನು ₹16.62 ಕೋಟಿ ಮೊತ್ತಕ್ಕೆ ಇತ್ಯರ್ಥಪಡಿಸಲಾಯಿತು.

ಹಿರಿಯ ನ್ಯಾಯಮೂರ್ತಿ ಎಸ್. ಸುನಿಲ್ ದತ್ ಯಾದವ ಅವರ ನೇತೃತ್ವದಲ್ಲಿ ನಡೆದ ಲೋಕ ಅದಾಲತ್‌ನಲ್ಲಿ ನ್ಯಾಯಮೂರ್ತಿಗಳಾದ ಸಚಿನ್ ಶಂಕರ ಮಗದುಮ್, ಸಿ.ಎಂ. ಪೂನಚ್ಚ ಹಾಗೂ ಗೀತಾ ಕೆ.ಬಿ. ಸೇರಿದಂತೆ ಸದಸ್ಯರು ನಾಲ್ಕು ಪೀಠಗಳಲ್ಲಿ ವಿಚಾರಣೆ ನಡೆಸಿದರು. ಒಟ್ಟು 1,037 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿತ್ತು.

ಅಪಘಾತ ಪರಿಹಾರ, ಭೂಸ್ವಾಧೀನ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರ ಸೇವಾ ಪ್ರಕರಣಗಳು, ರಿಟ್ ಅರ್ಜಿಗಳು ಹಾಗೂ ಆಸ್ತಿ ವಿವಾದಗಳಿಗೆ ಸಂಬಂಧಿಸಿದ ಹಲವು ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಲಾಯಿತು.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಭೂಸ್ವಾಧೀನಕ್ಕೆ ಸಂಬಂಧಿಸಿದ 46 ಮೇಲ್ಮನವಿಗಳನ್ನು ಸರ್ಕಾರ ನಿಗದಿಪಡಿಸಿದ್ದ ಒಂದು ಎಕರೆ ನೀರಾವರಿ ಜಮೀನಿಗೆ ₹40 ಲಕ್ಷ ಪರಿಹಾರ ಆಧಾರದ ಮೇಲೆ ಭೂಮಾಲೀಕರು ಮತ್ತು ಭೂಸ್ವಾಧೀನ ಅಧಿಕಾರಿಗಳ ನಡುವಿನ ಸಮಾಲೋಚನೆಯ ಮೂಲಕ ಇತ್ಯರ್ಥಪಡಿಸಲಾಯಿತು.

ಕೌಟುಂಬಿಕ ಹಾಗೂ ಆಸ್ತಿ ವಿವಾದಗಳಲ್ಲೂ ಉಭಯ ಪಕ್ಷಗಳ ನಡುವೆ ಸೌಹಾರ್ದಯುತ ರಾಜಿ ಸಂಧಾನಕ್ಕೆ ಅವಕಾಶ ಕಲ್ಪಿಸಿ, ವ್ಯಾಜ್ಯಗಳನ್ನು ನ್ಯಾಯಾಲಯದ ಹೊರಗೇ ಬಗೆಹರಿಸಿಕೊಳ್ಳುವಂತೆ ಮಾರ್ಗದರ್ಶನ ನೀಡಲಾಯಿತು ಎಂದು ಧಾರವಾಡ ಹೈಕೋರ್ಟ್ ಕಾನೂನು ಸೇವಾ ಸಮಿತಿಯ ಕಾರ್ಯದರ್ಶಿ ಹಾಗೂ ಅಧಿಕ ವಿಲೇಖನಾಧಿಕಾರಿ ಜೆರಾಲ್ಡ್ ರುಡಾಲ್ಫ್ ಮೆಂಡೋನ್ಸಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



### ಸಿದ್ದಲಿಂಗನಗರ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕರ ಸೇವೆಗೆ ಸಭಾಪತಿ ಬಸವರಾಜ ಹೊರಟ್ಟಿ ಶ್ಲಾಘನೆ

# ಸಾಧಕ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ಸಿದ್ದಲಿಂಗನಗರ ಸರ್ಕಾರಿ ಪ್ರೌಢಶಾಲೆ ತನ್ನ 33 ವರ್ಷದ ಇತಿಹಾಸದಲ್ಲೇ ಮೊದಲ ಬಾರಿಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ದಾಖಲಿಸಿ ಹೊಸ ಇತಿಹಾಸ ನಿರ್ಮಿಸಿದ್ದು, ಈ ಸಾಧನೆಯ ಹಿಂದಿರುವ ಶಿಕ್ಷಕರ ಸೇವೆ ಸಾರ್ಥಕವಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ತಾವು ದತ್ತು ಪಡೆದ ಶಾಲೆಯಲ್ಲಿ ಶೇ.100 ಫಲಿತಾಂಶಕ್ಕೆ ಕಾರಣರಾದ ಶಿಕ್ಷಕರು, ಪ್ರತಿಭಾವಂತ ವಿದ್ಯಾರ್ಥಿಗಳು ಹಾಗೂ ಬಡ್ತಿ ಹೊಂದಿ ವರ್ಗಾವಣೆಗೊಂಡ ಮುಖ್ಯೋಪಾಧ್ಯಾಯಿನಿ ಸಂಜೀವಿನಿ ಕೂಲಗುಡಿ ಅವರಿಗೆ ಅವ್ವ ಸೇವಾ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಶಾಲೆಯನ್ನು ದತ್ತು ಪಡೆದ ಬಳಿಕ ಮೂಲಭೂತ ಸೌಲಭ್ಯಗಳ ಜೊತೆಗೆ ಗುಣಮಟ್ಟದ ಶಿಕ್ಷಣಕ್ಕೂ ಆದ್ಯತೆ ನೀಡಲಾಗಿತ್ತು. ಅದರ ಫಲವಾಗಿ ಶಾಲೆ ಐತಿಹಾಸಿಕ ಸಾಧನೆ ಮಾಡಿದ್ದು, ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಸಮರ್ಪಣಾ ಮನೋಭಾವದಿಂದಲೇ ಇದು ಸಾಧ್ಯವಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ ಮಾತನಾಡಿ, ಬಸವರಾಜ ಹೊರಟ್ಟಿ ಅವರು ಶಾಲೆಯನ್ನು ದತ್ತು ಪಡೆದು ಸರ್ಕಾರಿ ಶಾಲೆಯನ್ನೇ ಮಾದರಿ ಶಿಕ್ಷಣ ಕೇಂದ್ರವನ್ನಾಗಿ ರೂಪಿಸಿರುವುದು ಶ್ಲಾಘನೀಯ ಎಂದರು.

ದತ್ತು ಉಸ್ತುವಾರಿ ಡಾ. ಬಸವರಾಜ ಧಾರವಾಡ ಮಾತನಾಡಿ, ಬಸವರಾಜ ಹೊರಟ್ಟಿ ದಂಪತಿ, ಮಾಜಿ ಸಂಸದ ಶಿವಕುಮಾರ ಉದಾಸಿ, ವಿಧಾನ ಪರಿಷತ್ ಸದಸ್ಯ ಪ್ರದೀಪ ಶೆಟ್ಟರ್, ನಗರಸಭೆ ಹಾಗೂ ದಾನಿಗಳ ಸಹಕಾರದಿಂದ ಶಾಲೆಯು ಈ ಮಟ್ಟದ ಸಾಧನೆ ಮಾಡಲು ಸಾಧ್ಯವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ 20ಕ್ಕೂ ಹೆಚ್ಚು ಶಿಕ್ಷಕರನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಮುಖ್ಯೋಪಾಧ್ಯಾಯಿನಿಯಾಗಿ ಬಡ್ತಿ ಹೊಂದಿದ ಸಂಜೀವಿನಿ ಕೂಲಗುಡಿ ಅವರಿಗೆ ಆತ್ಮೀಯ ಬೀಳ್ಕೊಡುಗೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಎಸ್.ಎಸ್. ಪಟ್ಟಣಶೆಟ್ಟಿ, ಐ.ಬಿ. ಬೆನಕಪ್ಪ, ಬಿ.ಎಫ್. ಪೂಜಾರ ಸೇರಿದಂತೆ ಹಲವು ಗಣ್ಯರು, ಶಿಕ್ಷಕರು, ಪೋಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> **ಸಿದ್ದಲಿಂಗನಗರ ಶಾಲೆಯ ಶೇ.100 ಫಲಿತಾಂಶ ಶಿಕ್ಷಕರ ಸಮರ್ಪಣೆ, ವಿದ್ಯಾರ್ಥಿಗಳ ಶ್ರಮ ಮತ್ತು ಸಮಾಜದ ಸಹಕಾರದ ಫಲ. ಇಂತಹ ಸೇವೆ ಶಿಕ್ಷಣ ಕ್ಷೇತ್ರಕ್ಕೆ ಮಾದರಿ.**
>
> **- ಬಸವರಾಜ ಹೊರಟ್ಟಿ**

# ಪಂಚಮಸಾಲಿ ಸಮಾಜದಿಂದ ಸಾಧಕರಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಲಿಂಗಾಯತ ಪಂಚಮಸಾಲಿ ಸಮಾಜ ಯುವ ಘಟಕದ ವತಿಯಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಕಲಾವಿದರು ಮತ್ತು ಗಣ್ಯರಿಗೆ ಸನ್ಮಾನ ಸಮಾರಂಭ ವಿಜೃಂಭಣೆಯಿಂದ ನಡೆಯಿತು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪ್ರಥಮ ಜಗದ್ಗುರು ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳು ವಹಿಸಿದ್ದರು. ಮಾಜಿ ಸಚಿವರು ಹಾಗೂ ನರಗುಂದ ಶಾಸಕ ಸಿ.ಸಿ. ಪಾಟೀಲ ಕಾರ್ಯಕ್ರಮ ಉದ್ಘಾಟಿಸಿದರು. ಧಾರವಾಡ ಪಶ್ಚಿಮ ಕ್ಷೇತ್ರದ ಶಾಸಕ ಅರವಿಂದ ಬೆಲ್ಲದ ಅವರು ವೀರರಾಣಿ ಕಿತ್ತೂರು ಚೆನ್ನಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಲಿಂಗಾಯತ ಪಂಚಮಸಾಲಿ ಸಮಾಜ ಯುವ ಘಟಕದ ಅಧ್ಯಕ್ಷ ಅಯ್ಯಪ್ಪ ಅಂಗಡಿ ವಹಿಸಿದ್ದರು.

ಈ ಸಂದರ್ಭದಲ್ಲಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಕಲಾವಿದರು ಹಾಗೂ ಗಣ್ಯರನ್ನು ಸನ್ಮಾನಿಸಲಾಯಿತು. ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಮಾಜದ ಮುಖಂಡರಾದ ಸಂಗಮೇಶ ಕೊಳ್ಳಿ, ವಿಜಯಕುಮಾರ ಗಡ್ಡಿ, ಎಂ.ಎಸ್. ಕರಿಗೌಡ್ರ, ಮಹಾಂತೇಶ ನಲವಡಿ, ಬಾಲಚಂದ್ರ ಭರಮಗೌಡ್ರ, ಕೆ.ವಿ. ಗದಗಿನ, ವೀರಣ್ಣ ಮೇಟಿ, ಉಪಾಧ್ಯಕ್ಷರಾದ ಬಸವರಾಜ ಗಡ್ಡೆಪ್ಪನವರ, ನಿಂಗಪ್ಪ ಪಿರೋಜಿ, ಆರ್.ವಿ. ಗೋಪನಾಳ, ಮಲ್ಲಿಕಾರ್ಜುನ ಹಿರೇಕೊಪ್ಪ, ಶಿವರಾಜ ಶಿವನಗೌಡ್ರ, ಭದ್ರೇಶ ಕುಸ್ಲಾಪುರ, ಮಹಿಳಾ ಜಿಲ್ಲಾ ಘಟಕದ ಅಧ್ಯಕ್ಷೆ ಲಲಿತಾ ಗೊಳಗೊಳಕಿ ಸೇರಿದಂತೆ ಸಮಾಜದ ಹಿರಿಯರು, ಮಹಿಳೆಯರು, ಯುವಕರು ಹಾಗೂ ವಿವಿಧ ಭಾಗಗಳಿಂದ ಆಗಮಿಸಿದ್ದ ಸದಸ್ಯರು ಉಪಸ್ಥಿತರಿದ್ದರು.

# ಗುತ್ತಿಗೆದಾರರ ಹಿಡಿತದಿಂದ ಉದ್ಯಾನವನಕ್ಕೆ ಮುಕ್ತಿ ನೀಡಿ!



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ವಾರ್ಡ್ ಸಂಖ್ಯೆ 11ರ ವಿವೇಕಾನಂದ ನಗರದ ಶ್ರೀ ಶಾರದಾ ಮಾತೆ ಹಾಗೂ ಶ್ರೀ ರಾಮಕೃಷ್ಣ ಪರಮಹಂಸ ಉದ್ಯಾನವನ ಹಲವು ವರ್ಷಗಳಿಂದ ಗುತ್ತಿಗೆದಾರರ ಸಾಮಗ್ರಿಗಳ ಸಂಗ್ರಹ ಕೇಂದ್ರವಾಗಿ ಮಾರ್ಪಟ್ಟಿದ್ದು, ಸಾರ್ವಜನಿಕರ ಬಳಕೆಗೆ ಉದ್ಯಾನವನ್ನು ಮುಕ್ತಗೊಳಿಸಿ ಅಭಿವೃದ್ಧಿಪಡಿಸುವಂತೆ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ (ರಿ) ವತಿಯಿಂದ ಜಿಲ್ಲಾಧಿಕಾರಿ, ನಗರಸಭೆಯ ಆಡಳಿತಾಧಿಕಾರಿ ಹಾಗೂ ಪೌರಾಯುಕ್ತರಿಗೆ ಮನವಿ ಸಲ್ಲಿಸಲಾಗಿದೆ.


ಸಮಿತಿಯ ಪದಾಧಿಕಾರಿಗಳು ಮಾತನಾಡಿ, ಸುಮಾರು ಎರಡು ವರ್ಷಗಳ ಹಿಂದೆ ₹10 ಲಕ್ಷ ವೆಚ್ಚದಲ್ಲಿ ಉದ್ಯಾನದಲ್ಲಿ ವಾಕಿಂಗ್ ಪಾಥ್ ನಿರ್ಮಿಸಲಾಗಿದ್ದರೂ, 247 ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದ ಗುತ್ತಿಗೆದಾರರು ಕಾಮಗಾರಿ ಸಾಮಗ್ರಿಗಳನ್ನು ಉದ್ಯಾನದಲ್ಲೇ ಸಂಗ್ರಹಿಸಿರುವ ಕಾರಣ ಸಾರ್ವಜನಿಕರಿಗೆ ಅದರ ಉಪಯೋಗವೇ ಇಲ್ಲದಂತಾಗಿದೆ ಎಂದು ದೂರಿದರು.

ಇದರ ಜೊತೆಗೆ ಉದ್ಯಾನದಲ್ಲಿ ಗಿಡಗಂಟಿಗಳು ಬೆಳೆದು ನಿರ್ವಹಣೆ ಇಲ್ಲದೆ ವಾಕಿಂಗ್ ಪಾಥ್ ಹಾಳಾಗುತ್ತಿದ್ದು, ಹಲವು ಬಾರಿ ಮೌಖಿಕ ಹಾಗೂ ಲಿಖಿತ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ನಾಗರಿಕರ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ತಿಳಿಸಿದರು. ಉದ್ಯಾನ ಅಭಿವೃದ್ಧಿಗೆ ನಗರಾಭಿವೃದ್ಧಿ ಪ್ರಾಧಿಕಾರದಿಂದ ₹60 ಲಕ್ಷ ಅನುದಾನವೂ ಮೀಸಲಾಗಿದ್ದು, ಮೊದಲು ಉದ್ಯಾನದಲ್ಲಿರುವ ಗುತ್ತಿಗೆದಾರರ ಸಾಮಗ್ರಿಗಳನ್ನು ತೆರವುಗೊಳಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕು. ನಂತರ ಅಭಿವೃದ್ಧಿ ಕಾಮಗಾರಿಯನ್ನು ತ್ವರಿತವಾಗಿ ಆರಂಭಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ವಾರ್ಡ್ ಸಂಖ್ಯೆ 11ರ ನಾಗರಿಕರ ಪರವಾಗಿ ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ಸೇರಿದಂತೆ ಪದಾಧಿಕಾರಿಗಳು ಮನವಿ ಸಲ್ಲಿಸಿದರು.

### ಚಿಂತಕರ ಪ್ರೇರಣೆಯಿಂದಲೇ ಪ್ರಬುದ್ಧ ಸಾಹಿತಿಯಾಗಿ ಬೆಳೆದವರು ಡಾ. ಸಂಗಮೇಶ ತಮ್ಮನಗೌಡ್ರ

# ಕಿಟ್ಟೆಲ್ಲ ಮತ್ತು ಕನ್ನಡ ಕೃತಿ ಲೋಕಾರ್ಪಣೆ

> **ಒಬ್ಬ ಸಾಹಿತಿ ಪ್ರಬುದ್ಧನಾಗಿ ಬೆಳೆಯಲು ನಾಡು-ನುಡಿ ಚಿಂತಕರ ಪ್ರೇರಣೆ ಅತ್ಯಗತ್ಯ. ಡಾ. ಸಂಗಮೇಶ ತಮ್ಮನಗೌಡ್ರ ಅವರ 37 ವರ್ಷಗಳ ಸಾಹಿತ್ಯ ನಿಷ್ಠೆಯೇ 115ನೇ ಕೃತಿಯ ಪ್ರಕಟಣೆಗೆ ಕಾರಣವಾಗಿದೆ.**
>
> **- ಮಲ್ಲಿಕಾರ್ಜುನ ಭೃಂಗಿಮಠ**, ಸಾಹಿತಿ




**ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಲಕ್ಷ್ಮೇಶ್ವರದ ಹಿರಿಯ ಸಾಹಿತಿ ಡಾ. ಸಂಗಮೇಶ ತಮ್ಮನಗೌಡ್ರ ಅವರ 115ನೇ ಕೃತಿ ಟಿಕಿಟ್ಟೆಲ್ಲ ಮತ್ತು ಕನ್ನಡಟಿ ನಾಡು-ನುಡಿ ಚಿಂತನ ಕವನ ಸಂಕಲನವನ್ನು ವಿಜಯಪುರದ ರಾಜರಾಜೇಶ್ವರಿ ಕಲ್ಯಾಣಮಂಟಪದಲ್ಲಿ ಕಾವ್ಯಶ್ರೀ ಚಾರಿಟಬಲ್ ಟ್ರಸ್ಟ್ ವತಿಯಿಂದ ನಡೆದ ಸಮಾರಂಭದಲ್ಲಿ ಲೋಕಾರ್ಪಣೆ ಮಾಡಲಾಯಿತು.

ಕೃತಿಯನ್ನು ಬಿಡುಗಡೆಗೊಳಿಸಿ ಮಾತನಾಡಿದ ಸಾಹಿತಿ ಹಾಗೂ ವಕೀಲ ಮಲ್ಲಿಕಾರ್ಜುನ ಭೃಂಗಿಮಠ, ಒಬ್ಬ ಸಾಹಿತಿ ಪ್ರಬುದ್ಧನಾಗಿ ಬೆಳೆಯಲು ನಾಡು-ನುಡಿ ಚಿಂತಕರ ಪ್ರೇರಣೆ ಅತ್ಯಂತ ಮುಖ್ಯವಾಗಿದೆ. ಫರ್ಡಿನಾಂಡ್ ಕಿಟ್ಟೆಲ್ಲ, ಬೇಂದ್ರೆ, ಕುವೆಂಪು, ಮಾಸ್ತಿ, ಗೋಕಾಕ, ಚಂದ್ರಶೇಖರ ಕಂಬಾರ, ಚೆನ್ನವೀರ ಕಣವಿ, ಯಶವಂತ ಚಿತ್ತಾಲ, ಡಾ. ಆರ್.ಸಿ. ಹಿರೇಮಠ, ಡಾ. ಪುಟ್ಟರಾಜ ಗವಾಯಿಗಳು ಸೇರಿದಂತೆ ಅನೇಕ ಮಹನೀಯರ ಚಿಂತನೆಗಳು ಡಾ. ತಮ್ಮನಗೌಡ್ರ ಅವರ ಸಾಹಿತ್ಯಕ್ಕೆ ಪ್ರೇರಣೆಯಾಗಿವೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾವ್ಯಶ್ರೀ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಡಾ. ಜಿ. ಶಿವಣ್ಣ ಮಾತನಾಡಿ, ಜರ್ಮನಿಯಿಂದ ಬಂದು ಕನ್ನಡ ಭಾಷೆ ಕಲಿತು ನಿಘಂಟು ರಚಿಸಿದ ಫರ್ಡಿನಾಂಡ್ ಕಿಟ್ಟೆಲ್ಲ ಅವರ ಕನ್ನಡ ಪ್ರೇಮ ಹಾಗೂ ಕನ್ನಡ ನಾಡು-ನುಡಿಗಾಗಿ ದುಡಿದ ಚಿಂತಕರ ವ್ಯಕ್ತಿತ್ವವನ್ನು ಡಾ. ತಮ್ಮನಗೌಡ್ರ ಅವರು ತಮ್ಮ ಕೃತಿಯಲ್ಲಿ ಅರ್ಥಪೂರ್ಣವಾಗಿ ಕಟ್ಟಿಕೊಟ್ಟಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಪೂಜ್ಯ ಬಸವಲಿಂಗ ಶರಣರು ಹಾಗೂ ಡಾ. ಸೈಯದ್ ಫೈರೋಜ್ ಹುಸೇನಿ ವಹಿಸಿದ್ದರು. ಈ ಸಂದರ್ಭದಲ್ಲಿ ಡಾ. ಪ್ರಭುಗೌಡ ಲಿಂಗದಹಳ್ಳಿ, ಪ್ರೊ. ಸುರೇಶ ಗಂಡನಹಳ್ಳಿ, ಅಲ್ ಹಾಜ್ ಡಾ. ಜಿ.ಡಿ. ಕೊಟ್ನಾಳ ದಂಪತಿ, ಶರಣು ಸಿಂಧೆ, ಪಂಡಿತ ಅವಟಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಶೈಲಾ ಮಠಪತಿ ಕಾರ್ಯಕ್ರಮ ನಿರೂಪಿಸಿದರು.

# ಯುವ ನಿಧಿಗೆ ನೋಂದಣಿ ಆರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವ ನಿಧಿ ಯೋಜನೆ ಅಡಿಯಲ್ಲಿ 2023, 2024, 2025 ಹಾಗೂ 2026ನೇ ಸಾಲಿನಲ್ಲಿ ಪದವಿ ಮತ್ತು ಡಿಪ್ಲೊಮಾ ಪೂರ್ಣಗೊಳಿಸಿ ನಿರುದ್ಯೋಗಿಯಾಗಿರುವ ಅರ್ಹ ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಯೋಜನೆಯಡಿ ಪದವೀಧರರಿಗೆ ತಿಂಗಳಿಗೆ ₹3,000 ಹಾಗೂ ಡಿಪ್ಲೊಮಾ ಪದವೀಧರರಿಗೆ ₹1,500 ನಿರುದ್ಯೋಗ ಭತ್ಯೆ ನೇರವಾಗಿ ಅವರ ಬ್ಯಾಂಕ್ ಖಾತೆಗೆ ಜಮೆಯಾಗಲಿದೆ. ಫಲಿತಾಂಶ ಪ್ರಕಟಗೊಂಡು 180 ದಿನಗಳ ಕಾಲ ನಿರುದ್ಯೋಗಿಯಾಗಿರುವ ಅಭ್ಯರ್ಥಿಗಳು ಈ ಸೌಲಭ್ಯಕ್ಕೆ ಅರ್ಹರಾಗಿರುತ್ತಾರೆ. ಹೊಸದಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ತಮ್ಮ ಮೂಲ ದಾಖಲಾತಿಗಳೊಂದಿಗೆ ಗದಗ ಜಿಲ್ಲಾ ಆಡಳಿತ ಭವನದ 2ನೇ ಮಹಡಿ, ಕೊಠಡಿ ಸಂಖ್ಯೆ 215ರಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಗೆ ಖುದ್ದಾಗಿ ಭೇಟಿ ನೀಡಿ ದಾಖಲೆ ಪರಿಶೀಲನೆ ಮತ್ತು ದೃಢೀಕರಣ ಮಾಡಿಸಿಕೊಳ್ಳಬೇಕು.ಹೆಚ್ಚಿನ ಮಾಹಿತಿಗಾಗಿ 08372-220609 ಅಥವಾ 9901203229 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎಸ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆಡಳಿತ ವ್ಯವಸ್ಥೆ ಭದ್ರತೆಗೆ ಜಂಟಿ ಕ್ರಿಯಾ ಯೋಜನೆ ಸಿದ್ಧ ರಾಜ್ಯ ಮಟ್ಟದ ಕಾರ್ಯಾಗಾರದಲ್ಲಿ ತಜ್ಞರ ಚರ್ಚೆ

# ನಾಗರಿಕರ ದತ್ತಾಂಶ ಸುರಕ್ಷತೆಗೆ ರಾಜ್ಯ ಸರ್ಕಾರದ ಒತ್ತು




**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ಸರ್ಕಾರದ ಡಿಜಿಟಲ್ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ಸುರಕ್ಷಿತಗೊಳಿಸುವ ಉದ್ದೇಶದಿಂದ ಟಿರಾಜ್ಯದ ದತ್ತಾಂಶಕ್ಕಾಗಿ ಸೈಬರ್ ಭದ್ರತಾ ಚೌಕಟ್ಟನ್ನು ಬಲಪಡಿಸುವುದುಟಿ ವಿಷಯದ ಕುರಿತು ರಾಜ್ಯ ಮಟ್ಟದ ಕಾರ್ಯಾಗಾರ ಬೆಂಗಳೂರಿನಲ್ಲಿ ನಡೆಯಿತು.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ), ಇ-ಆಡಳಿತ ಕೇಂದ್ರ (ಇಛಿಎ), ಕರ್ನಾಟಕ ಸೈಬರ್ ಭದ್ರತಾ ಉತ್ಕೃಷ್ಟತಾ ಕೇಂದ್ರ (ಇಢಖಟ್ಛಿಓ) ಹಾಗೂ ರಾಷ್ಟ್ರೀಯ ಇ-ಆಡಳಿತ ವಿಭಾಗದ ಸಹಯೋಗದಲ್ಲಿ ದಿ ಲಲಿತ್ ಅಶೋಕ್ ಹೋಟೆಲ್‌ನಲ್ಲಿ ಆಯೋಜಿಸಿದ್ದ ಕಾರ್ಯಾಗಾರದಲ್ಲಿ 30ಕ್ಕೂ ಹೆಚ್ಚು ಇಲಾಖೆಗಳು, ನಿಗಮಗಳು, ಮಂಡಳಿಗಳು ಹಾಗೂ ಸರ್ಕಾರಿ ಸಂಸ್ಥೆಗಳ 80ಕ್ಕೂ ಅಧಿಕ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು. ಕಾರ್ಯಾಗಾರವನ್ನು ಡಿಪಿಎಆರ್ (ಇ-ಆಡಳಿತ) ಪ್ರಧಾನ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ (ಐಅಖ), ಕರ್ನಾಟಕ ಇನ್ನೋವೇಶನ್ ಆಂಡ್ ಟೆಕ್ನಾಲಜಿ ಸೊಸೈಟಿ (ಓಐಖಖ) ವ್ಯವಸ್ಥಾಪಕ ನಿರ್ದೇಶಕ ಡಾ. ಅವಿನಾಶ್ ಮೆನನ್ ರಾಜೇಂದ್ರನ್ (ಐಅಖ) ಸೇರಿದಂತೆ ಹಿರಿಯ ಅಧಿಕಾರಿಗಳು ಉದ್ಘಾಟಿಸಿದರು.

ಕಾರ್ಯಾಗಾರದಲ್ಲಿ ಟಿಭವಿಷ್ಯಕ್ಕಾಗಿ ಸೈಬರ್ ಸನ್ನದ್ಧ ಕರ್ನಾಟಕಟಿ ಹಾಗೂ ಟಿಇ-ಆಡಳಿತಕ್ಕಾಗಿ ಸೈಬರ್ ಸ್ಥಿತಿಸ್ಥಾಪಕತ್ವಟಿ ವಿಷಯಗಳ ಕುರಿತು ತಜ್ಞರು ಉಪನ್ಯಾಸ ನೀಡಿದರು. ನಾಗರಿಕರ ದತ್ತಾಂಶ ರಕ್ಷಣೆ, ಸರ್ಕಾರದ ಡಿಜಿಟಲ್ ಮೂಲಸೌಕರ್ಯ ಭದ್ರತೆ ಹಾಗೂ ಸೈಬರ್ ಸ್ಥಿತಿಸ್ಥಾಪಕತ್ವ ಬಲಪಡಿಸುವ ಅಗತ್ಯವನ್ನು ಒತ್ತಿ ಹೇಳಲಾಯಿತು.

ರಾಜ್ಯ ದತ್ತಾಂಶ ಕೇಂದ್ರದ ಸೈಬರ್ ಭದ್ರತೆ, ಕೆಎಸ್‌ವಾನ್ (KSWAN) ಭದ್ರತೆ, ಸೆಕ್ಯುರಿಟಿ ಆಪರೇಷನ್ಸ್ ಸೆಂಟರ್ (SOC), ರಾಜ್ಯ ಇಖಐಖ, ಘಟ್ಟಿಟ ಖ್ಠಿಠಿ ತತ್ವ, ದತ್ತಾಂಶ ವರ್ಗೀಕರಣ, ಡಿಪಿಡಿಪಿ (DPDP) ಸನ್ನದ್ಧತೆ ಹಾಗೂ ಸೈಬರ್ ಭದ್ರತಾ ಸಾಮರ್ಥ್ಯ ವೃದ್ಧಿ ಸೇರಿದಂತೆ ಆರು ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಿತು.

ಕಾರ್ಯಾಗಾರದ ಅಂತ್ಯದಲ್ಲಿ ಸರ್ಕಾರಿ ಇಲಾಖೆಗಳಲ್ಲಿ ಸೈಬರ್ ಭದ್ರತೆಯನ್ನು ಇನ್ನಷ್ಟು ಬಲಪಡಿಸಲು ಟಿಜಂಟಿ ಕ್ರಿಯಾ ಯೋಜನೆಟಿ (Joint Action Plan) ಸಿದ್ಧಪಡಿಸಲಾಯಿತು. ಸುರಕ್ಷಿತ, ಸ್ಥಿತಿಸ್ಥಾಪಕ ಮತ್ತು ಭವಿಷ್ಯಕ್ಕೆ ಸನ್ನದ್ಧವಾದ ಡಿಜಿಟಲ್ ಆಡಳಿತ ವ್ಯವಸ್ಥೆ ನಿರ್ಮಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಈ ಸಂದರ್ಭದಲ್ಲಿ ತಿಳಿಸಲಾಯಿತು.

## ಎಸ್.ಜಾನಕಿ ನಿಧನಕ್ಕೆ ಡಾ. ತೋಂಟದ ಶ್ರೀಗಳ ಸಂತಾಪ



**ವಿಜಯಸಾಕ್ಷಿ ಸುದ್ದಿ, ಗದಗ**

ಖ್ಯಾತ ಹಿನ್ನೆಲೆ ಗಾಯಕಿ ಎಸ್. ಜಾನಕಿ ಅವರ ನಿಧನದಿಂದ ಸಂಗೀತ ಲೋಕಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಡಂಬಳ-ಗದಗ ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಪೀಠಾಧಿಪತಿಗಳಾದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಂತಾಪ ಸೂಚಿಸಿದ್ದಾರೆ.

ಸಂತಾಪ ಸಂದೇಶದಲ್ಲಿ ಅವರು, 20ಕ್ಕೂ ಹೆಚ್ಚು ಭಾಷೆಗಳಲ್ಲಿ 48 ಸಾವಿರಕ್ಕೂ ಅಧಿಕ ಚಲನಚಿತ್ರ ಗೀತೆಗಳನ್ನು ಹಾಡುವ ಮೂಲಕ ಎಸ್. ಜಾನಕಿ ಅವರು ಭಾರತೀಯ ಸಂಗೀತ ಲೋಕವನ್ನು ಶ್ರೀಮಂತಗೊಳಿಸಿದ್ದಾರೆ.

ಅವರ ಅಪೂರ್ವ ಗಾಯನ ಪ್ರತಿಭೆ ಹಾಗೂ ಸಂಗೀತ ಕ್ಷೇತ್ರಕ್ಕೆ ಸಲ್ಲಿಸಿದ ಅನನ್ಯ ಸೇವೆಗೆ ಅನೇಕ ಪ್ರಶಸ್ತಿ-ಪುರಸ್ಕಾರಗಳು ಸಂದಿವೆ. ಅವರ ಗಾಯನ ಜನಮನದಲ್ಲಿ ಶಾಶ್ವತವಾಗಿ ಉಳಿಯಲಿದೆ ಎಂದು ತಿಳಿಸಿದ್ದಾರೆ.

## ಶಿಕ್ಷಕಿ ರತ್ನಾ ಬಬಲಿಗೆ ರಾಷ್ಟ್ರ ಶಿಕ್ಷಣ ರತ್ನ ಪ್ರಶಸ್ತಿ




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಸರ್ಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರ ಸಹ ಶಿಕ್ಷಕಿ ರತ್ನಾ ಬಬಲಿ ಅವರಿಗೆ ಶಿಕ್ಷಣ ಕ್ಷೇತ್ರದಲ್ಲಿನ ಗಣನೀಯ ಸೇವೆಯನ್ನು ಗುರುತಿಸಿ ಟಿರಾಷ್ಟ್ರ ಶಿಕ್ಷಣ ರತ್ನಟಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಹುಬ್ಬಳ್ಳಿಯ ಬೆಳಕು ಸಾಹಿತಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಟ್ರಸ್ಟ್ (ರಿ) ವತಿಯಿಂದ ಆಯೋಜಿಸಿದ್ದ 125ನೇ ಬೆಳಕು ಸಮ್ಮೇಳನದಲ್ಲಿ ಅಕ್ಷರದವ್ವ ಲೂಸಿ ಸಾಲ್ಡಾನ ದತ್ತಿ ಪ್ರಶಸ್ತಿ ಅಡಿಯಲ್ಲಿ ಈ ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮವು ಹುಬ್ಬಳ್ಳಿಯ ಸವಾಯಿ ಗಂಧರ್ವ ಕಲಾಮಂದಿರದಲ್ಲಿ ನಡೆಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಅಖಿಲ ಭಾರತ ಶಿಕ್ಷಕರ ಫೆಡರೇಶನ್ ರಾಷ್ಟ್ರೀಯ ಅಧ್ಯಕ್ಷ ಬಸವರಾಜ ಗುರಿಕಾರ, ಬೆಳಕು ಟ್ರಸ್ಟ್ ನಾಡಿನ ಶಿಕ್ಷಕರು, ಸಾಧಕರು ಹಾಗೂ ರೈತರನ್ನು ಗುರುತಿಸಿ ಗೌರವಿಸುವ ಮೂಲಕ ಸಾಹಿತ್ಯ, ಸಂಗೀತ ಮತ್ತು ಸಂಸ್ಕೃತಿಯ ಉಳಿವು-ಬೆಳವಿಗೆ ಮಹತ್ವದ ಕೊಡುಗೆ ನೀಡುತ್ತಿದೆ. ಇಂತಹ ಸಮ್ಮೇಳನಗಳು ಸಾಧಕರಿಗೆ ಮತ್ತಷ್ಟು ಪ್ರೇರಣೆ ನೀಡುತ್ತವೆ ಎಂದು ಹೇಳಿದರು.

ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಖಜಾಂಚಿ ವಿ.ವಿ. ಶಿವರುದ್ರಯ್ಯ, ಬೆಳಕು ಟ್ರಸ್ಟ್ ಅಧ್ಯಕ್ಷ ಅಣ್ಣಪ್ಪ ಮೇಟಿಗೌಡ, ಮಹಿಳಾ ಘಟಕದ ಗೌರವಾಧ್ಯಕ್ಷೆ ನಿರ್ಮಲಾ ಯಲಿಗಾರ, ಕೆ.ಪಿ. ಸುಜಾತಾ, ಎಲ್.ಐ. ಲಕ್ಕಮ್ಮನವರ, ಮಂಜುನಾಥ ಮಟ್ಟಿ ಸೇರಿದಂತೆ ಟ್ರಸ್ಟ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಬೆಳೆ ಬದಲಾವಣೆಗೆ ರೈತರಿಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಬೆಳೆ ಸಾಲ ಪಡೆದ ರೈತರು ಮಳೆಯ ಕೊರತೆಯಿಂದ ಬೆಳೆ ಬದಲಾವಣೆ ಮಾಡಿದರೆ, ಬೆಳೆ ವಿಮೆ ಯೋಜನೆಯಡಿ ಕ್ರಾಪ್ ಚೇಂಜ್ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ.

ಜಿಲ್ಲೆಯಲ್ಲಿ ಹೆಸರು (ಮಳೆ ಆಶ್ರಿತ) ಹಾಗೂ ಹತ್ತಿ (ಮಳೆ ಆಶ್ರಿತ ಮತ್ತು ನೀರಾವರಿ) ಬೆಳೆಗಳ ವಿಮೆ ನೋಂದಣಿಗೆ ಜುಲೈ 15 ಕೊನೆಯ ದಿನವಾಗಿದೆ. ನೋಂದಣಿ ಅಂತಿಮ ದಿನಾಂಕಕ್ಕೆ ಎರಡು ದಿನ ಮೊದಲು ಬ್ಯಾಂಕ್‌ಗೆ ಮಾಹಿತಿ ನೀಡಿ ಬೆಳೆ ಬದಲಾವಣೆ ಮಾಡಿಕೊಳ್ಳಬೇಕು.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸುಮಾರು 45 ಸಾವಿರ ರೈತರಿಗೆ ಗುಂಪು ಕರೆ ಮೂಲಕ ಮಾಹಿತಿ ನೀಡಲಾಗಿದ್ದು, ಹೆಚ್ಚಿನ ಮಾಹಿತಿಗೆ ರೈತರು ಸಮೀಪದ ಬ್ಯಾಂಕ್, ರೈತ ಸಂಪರ್ಕ ಕೇಂದ್ರ, ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸುವಂತೆ ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka